# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ



**ಸುಭಾಷಿತ:**

ಕಷ್ಟ ಬಂತೆಂದು ಅತ್ತರೆ ನಾಟಕ ಎನ್ನುವರು
ಸುಖದಲ್ಲಿದ್ದೇನೆಂದು ನಕ್ಕರೆ ಹುಚ್ಚ ಎನ್ನುವರು
ಗೌರವಕ್ಕಾಗಿ ಮೌನವಾದರೆ ತಕ್ಕಿತಕ್ಕ ಎನ್ನುವರು
ಪರರಿಗೆ ನೆರವಾದರೆ ಅಧಿಕಪ್ರಸಂಗಿ ಎನ್ನುವರು
ಸಹವಾಸ ಸಾಕೆಂದರೆ ಅಹಂಕಾರಿ ಎನ್ನುವರು
ಸತ್ತವರನ್ನು ಬದುಕಿಸುವಂತೆ ಮಾಡುವರು
ಬದುಕಿದವರನ್ನು ಸಾಯಿಸಿಯೇ ಬಿಡುವರು
ಇದ್ದಾಗ ನಗುವರು.. ಹೋದಾಗ ಅಳುವರು
ಇದೆಲ್ಲವ ಬಿಟ್ಟು ಬಾಳಿದರೆ ಮನುಜನಾಗುವರು..
**ಭಗವಾನ್ ಶ್ರೀಕೃಷ್ಣ**




REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 11-10-2024 to 17-10-2024 ಬೆಲೆ: 7-00 ಸಂಪುಟ–4 ಸಂಚಿಕೆ–16 ಪುಟಗಳು–6












ಮೈಸೂರು ದಸರಾ ಎಂದರೆ ಆನೆಯ ಮೇಲೆ ಸಾಗುವ ಅಂಬಾರಿ, ಅರಮನೆಯಲ್ಲಿ ನಡೆಯುವ ಖಾಸಗಿ ದರ್ಬಾರ್ ಹೀಗೆ ಹಲವಾರು ಆಕರ್ಷಣೆಗಳನ್ನು ಕಾಣಬಹುದು. ಆದರೆ ಮಂಗಳೂರಿನ ದಸರಾದಲ್ಲಿ ಪ್ರಥಮ ಆಕರ್ಷಣೆ ಪಿಲಿ ವೇಷ. ನಾರ್ನಮಿ ಶುರುವಾಗುತ್ತಿದ್ದಂತೆ ಹುಲಿ ಘರ್ಜಿಸಲು ಪ್ರಾರಂಭಿಸುತ್ತದೆ. ಕರಾವಳಿಯಲ್ಲಿ ನಾರ್ನಮಿಗೆ ಹುಲಿ ವೇಷ ಹಾಕುವುದರಲ್ಲಿ ಧಾರ್ಮಿಕತೆ ಇದೆ. ಇಲ್ಲಿ ಮಕ್ಕಳಿಗೆ ಹರಕೆ ರೂಪದಲ್ಲಿ ಹುಲಿ ವೇಷ ಹಾಕುವುದನ್ನು ಕಾಣಬಹುದು. ಅಷ್ಟೇ ಅಲ್ಲದೆ ಹುಲಿ ವೇಷ ಹಾಕುವವರು ಶ್ರದ್ಧೆಯಿಂದ ಇರಬೇಕಾಗುತ್ತದೆ.

## ಮಾನಸಿಕ ಅಸ್ವಸ್ಥರ ಮೇಲೆ ದಯೆ ಇರಲಿ: ಶೋಭಾ ಬಿ.ಜಿ



**ಮಂಗಳೂರು:** ಇತ್ತೀಚಿನ ದಿನಗಳಲ್ಲಿ ಮಾನಸಿಕ ಖಿನ್ನತೆಯಿಂದ ಬಳಲುವವರ ಸಂಖ್ಯೆ ಹೆಚ್ಚಾಗುತ್ತಿದೆ. ಸಮಾಜದಲ್ಲಿ ಮಾನಸಿಕ ಅಸ್ವಸ್ಥತೆಗೆ ಒಳಪಡುವವರನ್ನು ಎಲ್ಲರಂತೆ ಕಾಣಬೇಕು. ಅವರ ಮೇಲೆ ದಯೆ ಮತ್ತು ಕರುಣೆ ಇರಲಿ. ಅವರನ್ನು ನಮ್ಮಂತೆ ಉಪಚರಿಸಬೇಕು. ಎಂದು ಹಿರಿಯ ಸಿವಿಲ್ ನ್ಯಾಯಾಧೀಶೆ ಮತ್ತು ದಕ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶೋಭಾ ಬಿ. ಜಿ. ಹೇಳಿದರು. ಅವರು ನಗರದ ವಿಶ್ವ ವಿದ್ಯಾನಿಲಯ ಕಾಲೇಜಿನ ರವೀಂದ್ರ ಕಲಾ ಭವನದಲ್ಲಿ ನಡೆದ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ವ್ಯಕ್ತಿಯ **3ನೇ ಪುಟಕ್ಕೆ**

## ಕಾಂತಾರಕ್ಕೂ ಮುಂಚೆ ಸಿನಿಮಾಗಳಲ್ಲಿ ದೈವರಾಧನೆ ಇತ್ತು –ರಿಷಬ್



**ಮಂಗಳೂರು:** ಕಾಂತಾರ ಬರುವ ಮೊದಲೇ ಸುಮಾರು ಸಿನಿಮಾಗಳಲ್ಲಿ ದೈವರಾಧನೆ ಬಂದಿದೆ. ಚೋಮನ ದುಡಿಯಿಂದ ಹಿಡಿದು ಅನೇಕ ಪುಸ್ತಕಗಳಲ್ಲೂ ದೈವಾರಾಧನೆ ಬಂದಿದೆ. ನಾವು ಮೊದಲ ಬಾರಿಗೆ ಮಾಡಲಿಲ್ಲ. ಸಿನಿಮಾ ಬಂದಾಗ ತುಂಬಾ ಪಾಪ್ಯುಲರ್ ಆದಾಗ ಮೂಲ ಸಂಸ್ಕೃತಿ ಬಗ್ಗೆ ಗೊತ್ತಿಲ್ಲದವರು ಈ ರೀತಿ ಮಾಡುತ್ತಾರೆ. ಬೇರೆ ಬೇರೆ ಸ್ಟೇಜ್ ಗಳಲ್ಲಿ ಕಾರ್ಯಕ್ರಮದಲ್ಲಿ ಹಾಕುವಾಗ ನೋವಾಗುತ್ತದೆ ಎಂದರು. **3ನೇ ಪುಟಕ್ಕೆ**

## ಮೊದಲು ಗೋರಿ ಕಟ್ತಾರೆ, ಬಳಿಕ ನಮ್ದು ಅಂತಾರೆ: ಸೂಲಿಬೆಲೆ



**ವಿಜಯಪುರ:** ವಕ್ಫ್ ಬೋರ್ಡ್ ಮೊದಲಿಗೆ ಗೋರಿ ಮಾಡಿಕೊಳ್ಳುತ್ತದೆ ಬಳಿಕ ಅದನ್ನು ನಮ್ಮದು ಎನ್ನುತ್ತದೆ. ಇದೇ ರೀತಿ ನಿಧಾನವಾಗಿ ಇಡೀ ಜಾಗ ಆಕ್ರಮಿಸಿಕೊಳ್ಳಲು ಪ್ರಯತ್ನಿಸುತ್ತಾರೆ. ಈಗಿನಿಂದಲೇ ಹೋರಾಟ ಮಾಡ್ಬೇಕು, ಇಲ್ಲದಿದ್ರೆ ಮುಂದೆ ಪರಿಣಾಮ ಕೆಟ್ಟದಾಗಲಿದೆ ಎಂದು ಚಿಂತಕ ಚಕ್ರವರ್ತಿ ಸೂಲಿಬೆಲೆ ಎಚ್ಚರಿಸಿದ್ದಾರೆ. ವಿಜಯಪುರದಲ್ಲಿ ವಕ್ಫ್ ಬೋರ್ಡ್ ಆಸ್ತಿ ಸರ್ವೆ ವಿಚಾರವಾಗಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಹಲವಾರು ವರ್ಷಗಳಿಂದ ರೈತರು ಇಲ್ಲಿ ನೆಲೆಸಿದ್ದಾರೆ. ರೈತರು **3ನೇ ಪುಟಕ್ಕೆ**







# ಸಂಪಾದಕೀಯ

ಕರಾವಳಿ ತರಂಗಿಣಿ

## ರತನ್ ಟಾಟಾ ಎಂಬ ಭಾರತದ ರತ್ನ...

– ಲಲಿತಶ್ರೀ ಪ್ರೀತಮ್ ರೈ



ಭಾರತದ ಅತ್ಯಂತ ಗೌರವಾನ್ವಿತ ಕೈಗಾರಿಕೋದ್ಯಮಿಗಳಲ್ಲಿ ಒಬ್ಬರಾದ ಮತ್ತು ಟಾಟಾ ಸನ್ಸ್‌ನ ಮಾಜಿ ಅಧ್ಯಕ್ಷರಾದ ರತನ್ ಟಾಟಾ ಇಂದು ನಮ್ಮೊಡನೆ ಇಲ್ಲ. ನಮಗೇನು ಹತ್ತಿರದ ಸಂಬಂಧಿಯಲ್ಲ. ಅಕ್ಕ ಪಕ್ಕದವರಲ್ಲ, ಎಲ್ಲೋ ದೂರದಲ್ಲಿ ನೋಡಿದವರಲ್ಲ. ಆದರೂ ಅದೇಕೋ ಸುದ್ದಿ ಕೇಳುತ್ತಿದ್ದಂತೆ ಬೇಜಾರಾಯಿತು. ಆದರೂ ಈ ಭೂಮಿ ಮೇಲೆ ಹುಟ್ಟಿದ ಪ್ರತಿಯೊಬ್ಬರೂ ದೇವರ ಪಾದ ಸೇರಲೇ ಬೇಕು. ಭಾರತದ ನೆಲದಲ್ಲಿ ಹುದುಗಿದ್ದ ಅಮೂಲ್ಯ ರತ್ನವೊಂದು ಮರೆಯಾದ ಭಾವ ಮೂಡಿದೆ. ರತನ್ ಟಾಟಾ ಅವರಿಗೆ ಅವರ ದೇಶ ಪ್ರೇಮ ಮತ್ತು ನಮ್ಮಜನಾನಾರಿಗೆ ರತನ್ ಟಾಟಾ ಮೇಲಿದ್ದ ಗೌರವದಿಂದ ನಮ್ಮನೆ ಮುಂದೆ ಟಾಟಾ ಬ್ರಾಂಡಿನ ಕಾರು ನಿಂತಿದೆ. ಇಂತಹ ಕೋಟ್ಯಾಂತರ ಅಭಿಮಾನಿಗಳನ್ನು ಹೊಂದಿರುವ ಟಾಟಾ ಎನ್ನುವ ಹೆಸರಿನೊಂದಿಗೆ ಲಕ್ಷಾಂತರ ಕುಟುಂಬಗಳು ಬದುಕುತ್ತಿವೆ. ಎಸ್‌ಬಿಐ ಕಾರ್ಡ್‌ನಲ್ಲಿ ಕೆಲಸ ಮಾಡುತ್ತಿರುವಾಗ ಟಾಟಾ ಕಂಪನಿ ಒಡನಾಟ ಹೆಚ್ಚಾಗಿತ್ತು. ಬೆಂಗಳೂರಿನಲ್ಲಿ ಇದ್ದ ಎಲ್ಲಾ ಟಾಟಾ ಕಂಪನಿಗಳಿಗೆ ನಮಗೆ ಮುಕ್ತ ಪ್ರವೇಶವಿದ್ದ ಕಾರಣ ಕೆಲಸದ ಮೇಲೆ ಆಗಾಗ ವಿಸಿಟ್ ಮಾಡುತ್ತಿದ್ದೆ. ಅಲ್ಲಿನ ನೌಕರರಿಗೆ ದೊರಕುತ್ತಿದ್ದ ಸೌಲಭ್ಯಗಳು ಇನ್ಯಾವ ಆ ಮಟ್ಟದ ಕಂಪನಿಗಳಲ್ಲಿ ದೊರಕುತ್ತಿದ್ದ ಹಾಗೆ ಕಾಣುತ್ತಿರಲಿಲ್ಲ. ರತನ್ ಟಾಟಾ ಬಂಗಾರದ ಚಮಚ ಬಾಯಲ್ಲಿ ಇಟ್ಟುಕೊಂಡು ಹುಟ್ಟಿದರೂ, ಐಷಾರಾಮಿ ಜೀವನದಿಂದ ದೂರ ಇದ್ದವರು ಎನ್ನುವುದು ವಿಶೇಷ. 1937ರಲ್ಲಿ ಜನಿಸಿದ ರತನ್‌ಜಿ ಕೇವಲ 10 ವರ್ಷದವನಿದ್ದಾಗ ಅವರ ಹೆತ್ತವರು ಒಬ್ಬರಿಗೊಬ್ಬರು ಬೇರ್ಪಟ್ಟ ನಂತರ, ಅವರನ್ನು ಅವರ ಅಜ್ಜಿ ನವಾಜ್‌ಬಾಯಿ ಟಾಟಾ ಬೆಳೆಸಿದರು. ಅವರ ಅಜ್ಜಿಯೊಂದಿಗಿನ ಈ ಬಲವಾದ ಸಂಬಂಧವು ಟಾಟಾ ಅವರು ಚಿಂತನಶೀಲ ಮತ್ತು ವಿನಮ್ರ ನಾಯಕರಾಗಲು ಸಹಾಯ ಮಾಡುವ ಪೋಷಣೆ ವಾತಾವರಣವನ್ನು ಒದಗಿಸಿತು ಎಂದರೆ ತಪ್ಪಾಗಲಾರದು. 1991ರಲ್ಲಿ ಟಾಟಾ ಸನ್ಸ್ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡು ರತನ್ ಟಾಟಾ ಅವರ ಹೊಸ ಪ್ರಯಾಣ ಪ್ರಾರಂಭವಾಯಿತು. ಭಾರತದ ಆರ್ಥಿಕ ಉದಾರೀಕರಣದ ಅವಧಿಯಲ್ಲಿ ಗುಂಪನ್ನು ಮುನ್ನಡೆಸಿದರು. ಅವರ ನಾಯಕತ್ವದಲ್ಲಿ, ಟಾಟಾ ಗ್ರೂಪ್ ಹಲವಾರು ದಿಟ್ಟ ಕ್ರಮಗಳನ್ನು ಕೈಗೊಂಡಿತು. ಇದರಲ್ಲಿ ಟೆಟ್ಲಿ, ಕೋರಸ್ ಮತ್ತು ಜಾಗ್ವಾರ್ ಲ್ಯಾಂಡ್ ರೋವರ್‌ನಂತಹ ಅಂತರರಾಷ್ಟ್ರೀಯ ದೈತ್ಯರನ್ನು ಸ್ವಾಧೀನಪಡಿಸಿಕೊಂಡಿದೆ. ರತನ್ ಟಾಟಾ ವ್ಯವಹಾರ ಮತ್ತು ಸಮಾಜಕ್ಕೆ ಅವರ ಗಮನಾರ್ಹ ಕೊಡುಗೆಗಳಿಗಾಗಿ ಹೆಸರುವಾಸಿಯಾಗಿದ್ದಾರೆ. ರತನ್ ಅಮೆರಿಕದ ಕಾರ್ನೆಲ್ ವಿಶ್ವವಿದ್ಯಾಲಯದಲ್ಲಿ ಬಿ.ಎಸ್ಸಿ ಆರ್ಕಿಟೆಕ್ಚರ್, ವಿಷಯವನ್ನು ತೆಗೆದುಕೊಂಡು, 1962 ರಲ್ಲಿ ಪಾಸ್ ಮಾಡಿದರು. ಬೃಹತ್ ಟಾಟಾ ಉದ್ಯಮದ ನಿರ್ದೇಶಕರಲ್ಲಿ, ರತನ್ ಒಬ್ಬರೇ ಅತ್ಯಂತ ಹೆಚ್ಚು ಓದಿಕೊಂಡಿರುವವರು. ಜೆ. ಆರ್.ಡಿ.ಟಾಟಾ ರವರು, ತಮ್ಮ ಛೇರ್ಮನ್ ಹುದ್ದೆಯನ್ನು ರತನ್ ರವರಿಗೆ, 1991 ರಲ್ಲಿ ಒಪ್ಪಿಸಿ, ಅವರಿಗೆ ಟಾಟಾ ಉದ್ಯಮದ ಸರ್ವಾಧಿಕಾರವನ್ನು ಕೊಟ್ಟರು. ರತನ್ ಅಧಿಕಾರಕ್ಕೆ ಬಂದ ಸ್ವಲ್ಪ ಸಮಯದಲ್ಲೇ, ಟಿ.ಸಿ.ಎಸ್ ಕಂಪೆನಿಯನ್ನು ಪಬ್ಲಿಕ್ ಶೇರ್ ಕಂಪೆನಿಯಾಗಿ ಪರಿವರ್ತಿಸಿದರು. ಟಾಟಾ ಮೋಟರ್ ನ್ಯೂಯಾರ್ಕ್ ಸ್ಟಾಕ್ ಎಕ್ಸ್ ಛೇಂಜ್‌ನಲ್ಲಿ ಸೇರ್ಪಡೆಯಾಯಿತು. ಟಾಟಾ ಉದ್ಯಮಗಳಾದ ಟಾಟಾ ಸ್ಟೀಲ್, ಟಾಟಾ ಮೋಟರ್ಸ್, ಟಾಟಾ ಪವರ್, ಟಾಟಾ ಕನ್ಸಲ್ಟೆನ್ಸಿ ಸರ್ವೀಸಸ್, ಟಾಟಾ ಟೀ, ಟಾಟಾ ತಂತ್ರಜ್ಞಾನ, ಇಂಡಿಯನ್ ಹೋಟೆಲ್ಸ್ ಮತ್ತು ಟಾಟಾ ಟೆಲಿ ಸರ್ವೀಸಸ್ ಮುಂತಾದ ಶ್ರೇಷ್ಠ ವಿಭಾಗಗಳಲ್ಲಿ ಹೊಸದಾಗಿ ಅಳವಡಿಸಿದ ಅತ್ಯಾಧುನಿಕ ತಾಂತ್ರಿಕ ಮತ್ತು ಮುಂದಾಲೋಚನೆಯ ಕ್ರಮಗಳಿಂದಾಗಿ ಅವುಗಳ ಮಟ್ಟವನ್ನು ಉನ್ನತ ಶಿಖರಕ್ಕೇರಿಸಿ, ಕಂಪೆನಿಯ ಲಾಭಾಂಶವನ್ನು ಹೆಚ್ಚಿಸಿದರು. ಟಾಟಾ ವಾಣಿಜ್ಯ ಪರಿವಾರ, ಈಗಾಗಲೇ ವಿಶ್ವದ 50 ವಿದೇಶಿ ಸಂಸ್ಥೆಗಳಲ್ಲಿ, ತನ್ನ ಬಂಡವಾಳವನ್ನು ಹಾಕಿ ಯಶಸ್ವಿಯಾಗಿ ವಹಿವಾಟು ನಡೆಸುತ್ತಿದೆ. ರತನ್ ಟಾಟಾರವರಿಗೆ, ದೇಸಿ ಕಾರೊಂದನ್ನು ಟಾಟಾ ಕಂಪೆನಿ ತಯಾರಿಸಿ ದೇಶಕ್ಕೆ ಒಪ್ಪಿಸಬೇಕೆಂಬ ಆಕಾಂಕ್ಷೆ ಬಹಳ ಸಮಯದಿಂದ ಇತ್ತು. ಟಾಟಾ ಇಂಡಿಕ ತಯಾರಿಕೆಯಿಂದಾಗಿ ಆ ಕನಸು ಸಾಕಾರವಾಯಿತು. ನಂತರ ಲಕ್ಷ ಬೆಲೆಯ ನ್ಯಾನೋ ಕಾರನ್ನು ಪರಿಚಯಿಸಿದರು. ರತನ್ ಟಾಟಾ ತಮ್ಮ ಕಂಪನಿ ತಯಾರಿಸಿರುವ ಹೊಸ ನ್ಯಾನೋ ಕಾರಿನ ಬಗ್ಗೆ ಜನ ಸಾಮಾನ್ಯರೊಟ್ಟಿಗೆ ಪ್ರಸ್ತಾವನೆ ಮಾಡುತ್ತಾ ಹೇಳಿದ್ದಾರೆ "ತಮ್ಮ ನ್ಯಾನೋ ಕಾರು ಎಲ್ಲಾ ರಕ್ಷಣಾ ಸೌಕರ್ಯಗಳನ್ನು, ಮಾಲಿನ್ಯಕಾರಕ ಹೊಗೆಯುಗುಳುವ ಪ್ರಮಾಣ ಹಾಗು ಮಾಲಿನ್ಯಕ್ಕೆ ಕಾರಣಕಾರಕಗಳ ಬಗ್ಗೆ ಬಹಳಷ್ಟು ಗಮನ ಹರಿಸಿ ತಯಾರಾಗಿರುವುದು ಹಾಗು ದ್ವಿಚಕ್ರ ವಾಹನಗಳಿಗಿಂತ ಕಡಿಮೆ ಮಾಲಿನ್ಯವನ್ನಷ್ಟೇ ಉಂಟುಮಾಡುತ್ತವೆ" ಎಂದಿದ್ದರು. ಹೀಗೆ ರತನ್ ಟಾಟಾರವರ ಬಗ್ಗೆ ಹೇಳುತ್ತಾ ಹೋದರೆ ಅದೆಷ್ಟು ಪುಸ್ತಕವನ್ನು ಬರೆಯಬಹುದೋ. ಈಗ ರತನ್ ಟಾಟಾ ಎನ್ನುವ ರತ್ನ ಅಸ್ತಂಗತವಾಗಿದೆ. ದೇಶಕ್ಕೆ ದೇಶವೇ ಮರುಗಿದೆ. ಈಗ ಜನರಿಗೆ ಅವರ ಸುಮಾರು ನಾಲ್ಕು ಸಾವಿರ ಕೋಟಿ ಆಸ್ತಿಯ ವಾರಸುದಾರರು ಯಾರು ಎನ್ನುವ ಕುತೂಹಲ ಕಾಡ ತೊಡಗಿದೆ. ಮನುಷ್ಯ ಏನೆ ಆಸ್ತಿ ಮಾಡಿದರೂ ಕೊನೆಗೆ ಬರೀ ಕೈಯಲ್ಲಿ ಹೊರಡುವುದಷ್ಟೇ ಉಳಿಯುವುದು. ಅದರ ನಡುವೆ ನಾವು ಮಾಡುವ ಒಳ್ಳೆಯ ಕೆಲಸ ಇತಿಹಾಸದ ಪುಟದಲ್ಲಿ ಮಿರುಗುತ್ತಿರುತ್ತದೆ.

# ಸಂಪ್ರದಾಯ

## ಕವಡಿಯಾಟ್ಟಂ



ಕವಡಿಯಾಟ್ಟಂ ತಮಿಳುನಾಡಿನಲ್ಲಿ ವಿಶೇಷವಾಗಿ ಮುರುಗನ್ ಅಂದರೆ ಸುಬ್ರಹ್ಮಣ್ಯನಿಗೆ ಮಾಡುವ ವಿಶೇಷ ರೀತಿಯ ಹರಕೆಯಾಗಿದೆ ಕಾವಾಡಿ ಎಂದರೆ ತಮಿಳಿನಲ್ಲಿ "ಹೊರೆ" ಎಂದರ್ಥ. ಅಂದರೆ ಸ್ವತಃ ಭೌತಿಕ ಹೊರೆಯಾಗಿದೆ ಎನ್ನುವಂತೆ ಅಭ್ಯಾಸವು ಋಣಭಾರದ ಬಂಧನವನ್ನು ಒತ್ತಿ ಹೇಳುತ್ತದೆ ಈ ಕಾವಡಿಯನ್ನು ಹೊರುವ ಮೂಲಕ. ಕವಡಿಯಾಟ್ಟಂ ಮಾಡುವವರು ತನ್ನ ಬೇಡಿಕೆಗಳಿಗಾಗಿ ಮುರುಗನ್ ಮುಂದೆ ಕಾವಡಿಯನ್ನು ಹೊರುತ್ತಾರೆ. ಸರಳವಾದ ಕಾವಡಿಯು ಭುಜಗಳ ಮೇಲೆ ಸಮತೋಲಿತವಾಗಿರುವ ಮರದ ಕಡ್ಡಿಯಾಗಿದ್ದು, ಎರಡೂ ತುದಿಗಳಲ್ಲಿ ತೂಕವನ್ನು ಹೊಂದಿರುತ್ತದೆ. ಸಾಮಾನ್ಯವಾಗಿ ಹಸುವಿನ ಹಾಲಿನ ಮಡಕೆಗಳನ್ನು ಇದ್ದರೆ, ಅದನ್ನು ಪಾಲ್ ಕವಾಡಿ ಎಂದು ಕರೆಯಲಾಗುತ್ತದೆ. ಸಾಂಪ್ರದಾಯಿಕ ಕಾವಡಿಯು ಎರಡು ಅರ್ಧವೃತ್ತಾಕಾರದ ಮರದ ಅಥವಾ ಉಕ್ಕಿನ ತುಂಡುಗಳನ್ನು ಒಳಗೊಂಡಿರುತ್ತದೆ. ಇವುಗಳನ್ನು ಬಾಗಿದ ಮತ್ತು ಅಡ್ಡ ರಚನೆಯಲ್ಲಿ ಜೋಡಿಸಲಾಗುತ್ತದೆ. ಅದು ವಾಹಕದ ಭುಜಗಳ ಮೇಲೆ ಸಮತೋಲನಗೊಳ್ಳುತ್ತದೆ. ಇದು ಸಾಮಾನ್ಯವಾಗಿ 30 ಕೆಜಿ ವರೆಗೆ ತೂಗುತ್ತದೆ. ಇಂತಹ ಕಾವಡಿಗಗಳನ್ನು ಹೂವುಗಳು ಮತ್ತು ನವಿಲು ಗರಿಗಳಿಂದ ಅಲಂಕರಿಸಲಾಗುತ್ತದೆ. ನರ್ತಕರು ಚಮ, ನಾಲಿಗೆ ಅಥವಾ ಕೆನ್ನೆಗಳನ್ನು ಚೂಪಾದ ಸೂಜಿಗಳಿಂದ ಚುಚ್ಚುವ ಮೂಲಕ ಕೂಡ ತಮ್ಮ ಭಕ್ತಿಯನ್ನು ತೋರಿಸುವುದನ್ನು ಕಾಣಬಹುದು. ಕಾವಡಿ ನೃತ್ಯವು ಡ್ರಮ್ಮಿಂಗ್ ಮತ್ತು ಪದ್ಯಗಳ ಪಠಣದಿಂದ ಕೂಡಿರುತ್ತದೆ. ಕಾವಡಿ ನೃತ್ಯ ಮಾಡುವ ಪುರುಷರು ಮೈರುಂಬಾ ವಿಭೂತಿಯನ್ನು ಹಚ್ಚಿಕೊಂಡಿರುತ್ತಾರೆ. ಈ ಕಾವಡಿ ನೃತ್ಯದಲ್ಲಿ ಹೆಚ್ಚಾಗಿ ಗಂಡಸರೇ ಭಾಗವಹಿಸುತ್ತಾರೆ. ನರ್ತಕರು ಸಾಮಾನ್ಯವಾಗಿ ಸ್ವಚ್ಛತೆಯನ್ನು ಇಟ್ಟುಕೊಳ್ಳುವುದರ ಮೂಲಕ, ನಿಯಮಿತವಾದ ಪ್ರಾರ್ಥನೆಗಳನ್ನು ಮಾಡುವ ಮೂಲಕ, ಸಸ್ಯಾಹಾರಿ ಆಹಾರವನ್ನು ಅನುಸರಿಸುವ ಮೂಲಕ ಮತ್ತು ಬ್ರಹ್ಮಚಾರಿಯಾಗಿ ಉಳಿದಿರುವ ಉಪವಾಸದ ಮೂಲಕ ತಮ್ಮನ್ನು ತಾವು ಸಿದ್ಧಪಡಿಸಿಕೊಳ್ಳುತ್ತಾರೆ. ಇದು ತಮಿಳರಿಗೆ ಬಹಳ ಪೂಜ್ಯನೀಯ ಕಾರ್ಯವಾಗಿದೆ.

# ವೈದ್ಯೋನಾರಾಯಣೋ ಹರೀಃ

## ಬೇಲದ ಹಣ್ಣು



ಬೇಲದ ಹಣ್ಣನ್ನು ಪವಿತ್ರ ಹಣ್ಣು ಎಂದು ಹೇಳಲಾಗುತ್ತದೆ. ಇದು ಶಿವನಿಗೆ ಪ್ರೀತಿ ಪಾತ್ರವಾದ ಹಣ್ಣು. ಶಿವರಾತ್ರಿ ದಿನ ಈ ಹಣ್ಣನ್ನು ಶಿವನಿಗೆ ಅರ್ಪಿಸಲಾಗುತ್ತದೆ. ಇದನ್ನು ಕಹಿ ಕಿತ್ತಳೆ, ಚಿನ್ನದ ಸೇಬು, ಕಲ್ಲಿನ ಸೇಬು ಅಥವಾ ಮರದ ಸೇಬು ಮುಂತಾದ ಇತರ ಹೆಸರುಗಳಿಂದ ಇದನ್ನು ಕರೆಯಲಾಗುತ್ತದೆ. ಇದನ್ನು ಕ್ಯಾನ್ಸರ್, ಮಧುಮೇಹ ಮತ್ತು ಬೊಜ್ಜಿನಂತಹ ಕಾಯಿಲೆಗಳನ್ನು ಗುಣಪಡಿಸಲು ಇದನ್ನು ಬಳಸಲಾಗುತ್ತದೆ. ಇದರಲ್ಲಿ ಸಾಕಷ್ಟು ಪೋಷಕಾಂಶಗಳು ಮತ್ತು ಜೀವಸತ್ವಗಳಿವೆ. ಹಣ್ಣನ್ನು ಆಯುರ್ವೇದ ಔಷಧಿಗಳಾಗಿ ಮತ್ತು ರುಚಿಯಾದ ಆಹಾರವಾಗಿ ಬಳಸಲಾಗುತ್ತದೆ. ಈ ಹಣ್ಣಿನ ಹೊರ ಕವಚ ತುಂಬಾ ಗಟ್ಟಿಯಾಗಿದ್ದು, ದುಂಡಾಗಿರುತ್ತದೆ, ಇದರ ಮರದ ಎಲ್ಲಾ ಭಾಗಗಳನ್ನು ಔಷಧೀಯ ಮತ್ತು ಆಯುರ್ವೇದಕ್ಕಾಗಿ ಬಳಸಲಾಗುತ್ತದೆ. ಕಾಯಿ ತಿಳಿ ಹಸಿರು ಬಣ್ಣದಿಂದ ಪ್ರಾರಂಭವಾಗಿ, ಹಣ್ಣಾದಂತೆ ಹಳದಿ ಬಣ್ಣಕ್ಕೆ ತಿರುಗುತ್ತದೆ. ಹಣ್ಣು ಸಿಹಿಯಾದ ನಾರಿನ ತಿರುಳನ್ನು ಹೊಂದಿರುತ್ತದೆ.

ಹಣ್ಣಿನ ತಿರುಳಿನ ಸೇವನೆಯೂ ಹಲ್ಲಿನ ವಸಡುಗಳನ್ನು ಬಲಪಡಿಸುತ್ತದೆ.

ಬೇಲದ ಹಣ್ಣಿನ ತಿರುಳನ್ನು ಸಕ್ಕರೆ ಜೊತೆ ಸೇರಿಸಿ ಹಸುವಿನ ಹಾಲಿನ ಜೊತೆ ತೆಗೆದುಕೊಂಡರೆ ಪಿತ್ತ ಶಮನವಾಗುವುದು.

ಬೇಲದ ಹಣ್ಣಿನ ಸೇವನೆ ಮಲಬದ್ಧತೆಯನ್ನು ನಿವಾರಿಸುತ್ತದೆ. ಇದು ಕರುಳನ್ನು ಸ್ವಚ್ಛಗೊಳಿಸಲು ಉತ್ತಮ ಆಯ್ಕೆಯಾಗಿದೆ.

ಅತಿಸಾರ ಮತ್ತು ಭೇದಿ ಚಿಕಿತ್ಸೆಗಾಗಿ ಹಸಿ ಹಣ್ಣುಗಳನ್ನು ಕತ್ತರಿಸಿ ಒಣಗಿಸಿದ ನಂತರ ಪುಡಿ ಮಾಡಿ, ಮಿಶ್ರಣವನ್ನು ಬಿಸಿನೀರು ಮತ್ತು ಸಕ್ಕರೆ ದ್ರಾವಣದೊಂದಿಗೆ ಬೆರೆಸಿ ದಿನಕ್ಕೆ ಎರಡು ಬಾರಿ ಕುಡಿಯಬೇಕು.

ಈ ಮಿಶ್ರಣವನ್ನು ತಿನ್ನುವುದರಿಂದ ಮಲದಲ್ಲಿನ ರಕ್ತದ ಸಮಸ್ಯೆ ಕಡಿಮೆಯಾಗುತ್ತದೆ. ಇದನ್ನು ನಿಯಮಿತವಾಗಿ ಸೇವಿಸಿದರೆ ಅದು ನಿಮ್ಮ ಜೀರ್ಣಾಂಗ ವ್ಯವಸ್ಥೆಯನ್ನು ಬಲಪಡಿಸುವುದರೊಂದಿಗೆ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ.

ಆಮ್ಲೀಯತೆಯ ಅಜೀರ್ಣಕ್ಕೆ ಚಿಕಿತ್ಸೆ ನೀಡಲು ಜೇನುತುಪ್ಪದ ಜೊತೆಗೆ ಈ ಹಣ್ಣಿನ ರಸವನ್ನು ಕುಡಿದರೆ ಉತ್ತಮ.

# ಕ್ಷೇತ್ರದರ್ಶನ

ಅರುಲ್ಮಿಗು ಅಧಿಪರಾಶಕ್ತಿ ಸಿದ್ಧರ ಪೀಠವು ತಮಿಳುನಾಡಿನ ಚೆನ್ನೈನಿಂದ ಸುಮಾರು 92 ಕಿಮೀ ದೂರದಲ್ಲಿರುವ ಮೇಲ್ಮರುವತ್ತೂರಿನಲ್ಲಿದೆ. ಇದನ್ನು ತಮಿಳುನಾಡಿನ ವಿವಿಧ ಧರ್ಮಗಳ 21 ಸಂತರು ಜೀವ–ಸಮಾಧಿಗಳನ್ನು ಹೊಂದಿದ್ದ ಸ್ಥಳವೆನ್ನಲಾಗುತ್ತದೆ. ಇಲ್ಲಿ ಆದಿ ಪರಾಶಕ್ತಿಯು ಆದಿಪರಾಶಕ್ತಿನ್ನು ಪೂಜಿಸಲಾಗುತ್ತದೆ. ಶಬರಿಮಲೆಗೆ ಗಂಡಸರು ಮಾಲೆ ಧರಿಸಿ ಯಾತ್ರೆ ಮಾಡುವ ಹಾಗೆ ಇಲ್ಲಿಗೆ ಮಹಿಳೆಯರು ಮಾಲೆ ಧರಿಸಿ, ವ್ರತದಿಂದಿದ್ದು ಯಾತ್ರ ಮಾಡುವುದು ಇಲ್ಲಿನ ವಿಶೇಷ. ಇಲ್ಲಿನ ಮಾಲೆ ದರಿಸಿದ ಮಹಿಳೆಯರು ಕೆಂಪು ಬಣ್ಣದ ವಸ್ತ್ರ ತೊಡುತ್ತಾರೆ. ಪ್ರಸ್ತುತ ದೇವಾಲಯದ ಗರ್ಭ ಗುಡಿ ಇರುವ ಜಾಗದಲ್ಲಿ 1960 ರ ದಶಕದ ವರೆಗೆ ಬೇವಿನ ಮರವನ್ನು ಹೊರತುಪಡಿಸಿ ಬೇರೇನೂ ಇರಲಿಲ್ಲ. ಕಹಿ ರುಚಿಯ ಹಣ್ಣುಗಳನ್ನು ನೀಡುವ ಇತರ ಬೇವಿನ ಮರಗಳಿಗಿಂತ ಭಿನ್ನವಾಗಿ, ಈ ಮರವು ಸಿಹಿಯಾದ ಮಕರಂದವನ್ನು ಸ್ರವಿಸುತ್ತಿತ್ತು ಎನ್ನಲಾಗುತ್ತದೆ. ಆ ಹಳ್ಳಿಯ ನಿವಾಸಿಗಳು ಈ ಮರದ ಕಡೆಯಿಂದ ಹಾದು ಹೋದಾಗಲೆಲ್ಲಾ ಈ ಮಕರಂದವನ್ನು



ಮೇಲ್ಮರ್ವತ್ತೂರು ಶ್ರೀ ಆದಿ ಪರಾಶಕ್ತಿ

ಸವಿಯಬೇಕೆಂಬ ತುಡಿತವನ್ನು ತಮ್ಮ ಮನಸ್ಸಿನಲ್ಲಿ ಹೊಂದುತ್ತಿದ್ದರಂತೆ. ಈ ಮಕರಂದವನ್ನು ಸವಿದ ನಂತರ ಅನೇಕ ದಾರಿಹೋಕರು ತಮ್ಮ ಕಾಯಿಲೆಗಳು ಮತ್ತು ರೋಗಗಳಿಂದ ಗುಣಮುಖರಾಗಿರುವುದರಿಂದ, ಈ ಮಾತು ಇಡೀ ಗ್ರಾಮ ಮತ್ತು ಅದರ ನೆರೆಹೊರೆಗಳಿಗೆ ವೇಗವಾಗಿ ಹರಡಿತು. ಈ ಹಳ್ಳಿಗರು ಅನಾರೋಗ್ಯದಿಂದ ಬಳಲುತ್ತಿರುವ ಸ್ನೇಹಿತರು ಮತ್ತು ಸಂಬಂಧಿಕರಿಗೆ ಈ ಅಮೃತದ ಹನಿಯನ್ನು ತೆಗೆದುಕೊಂಡು ಹೋಗುವುದು ವಾಡಿಕೆಯಾಯಿತು. ಅವರು ಇದನ್ನು ಔಷಧೀಯ ಮರವೆಂದು ಪರಿಗಣಿಸಿ ಆ ಮರವನ್ನು ರಕ್ಷಿಸಿದರಂತೆ. ಆದರೆ 1966ರಲ್ಲಿ ತೀವ್ರವಾದ ಚಂಡಮಾರುತವು ಈ ಬೇವಿನ ಮರವನ್ನು ಬೇರುಸಹಿತ ಕಿತ್ತುಹಾಕಿತು. ಇದರ ಕೆಳಗೆ ಸ್ವಯಂ ಉದಯೋನ್ಮುಖ, ನೈಸರ್ಗಿಕವಾಗಿ ರೂಪುಗೊಂಡ ಅಂಡಾಕಾರದ ಬಂಡೆಯಿಂದ ಕೆತ್ತಿದ ವಸ್ತು, ಗ್ರಾಮಸ್ಥರಿಗೆ ಮೊದಲ ಬಾರಿಗೆ ಕಾಣಿಸಿತಂತೆ. ಜನರು ಈ ಸ್ವಯಂಬುವಿನ ಮೇಲೆ ಒಂದು ಸಣ್ಣ ಗುಡಿಯನ್ನು ನಿರ್ಮಿಸಿ ಅದಕ್ಕೆ ಪೂಜೆಗಳನ್ನು ನಡೆಸಲು ಪ್ರಾರಂಭಿಸಿದರು. ಹಲವು ವರ್ಷಗಳ ಕಾಲ ಸ್ವಯಂಭುವನ್ನೇ ಪೂಜಿಸಲಾಗುತ್ತಿತ್ತು. ತಾಯಿ ಆದಿ ಪರಾಶಕ್ತಿಯ ವಿಗ್ರಹವನ್ನು ನಂತರ ಗರ್ಭಗುಡಿಯಲ್ಲಿ ನವೆಂಬರ್ 25, 1977 ರಂದು ಸ್ಥಾಪಿಸಲಾಯಿತು. ಸುಂದರವಾದ ದೇವಿಯ ವಿಗ್ರಹವು ಮೂರು ಅಡಿ ಎತ್ತರವಿದೆ, ಸಾವಿರ ದಳಗಳ ಕಮಲದ ಆಸನದ ಮೇಲೆ ಬಲಗಾಲು ಮಡಚಿ ಕುಳಿತಿದ್ದು, ತನ್ನ ಬಲಗೈಯಲ್ಲಿ ಕಮಲದ ಮೊಗ್ಗುವನ್ನು ಹಿಡಿದಿದ್ದಾಳೆ. ಅವಳ ಎಡ ಕೈ ಜ್ಞಾನ ಮುದ್ರೆಯಲ್ಲಿದ್ದು, ಅವಳ ಕೂದಲು ಜಡೆ ಮತ್ತು ಕಿರೀಟದಂತೆ ಮೇಲಕ್ಕೆ ಗಂಟು ಹಾಕಿದೆ. ಈ ಸ್ಥಳದಲ್ಲಿ, ಯಾರು 108 ಬಾರಿ ಸರಿಯಾದ ಉಪವಾಸದಿಂದ ಧ್ಯಾನವನ್ನು ಮಾಡುತ್ತಾರೆ ಮತ್ತು 9 ಬಾರಿ ಇರುಮುಡಿಯನ್ನು ಒಯ್ಯುತ್ತಾರೆ, ಅವರು ಕೆಟ್ಟ ದುಷ್ಪರಿಣಾಮಗಳಿಗೆ ಒಳಗಾಗುವುದಿಲ್ಲ ಎನ್ನುವುದು ಭಕ್ತರ ನಂಬಿಕೆ. ತಾಯಿಯು ಯಾವಾಗಲೂ ಜನರನ್ನು ಆಶೀರ್ವದಿಸುವುದಕ್ಕಾಗಿ ಪುತ್ರಮಂಟಪದಲ್ಲಿ ನೆಲೆಸುತ್ತಾಳೆ. ಈ ದಿನದವರೆಗೂ ಹಾವಿನ ರೂಪದಲ್ಲಿ ರಾತ್ರಿಯಲ್ಲಿ ಮಂಟಪದಲ್ಲಿ ತಂಗುವ ಭಕ್ತರ ಮುಂದೆ ತಾಯಿ ಕಾಣಿಸಿಕೊಳ್ಳುತ್ತಾಳೆ ಎನ್ನುವುದು ನಂಬಿಕೆ. ಜಾತಿ, ಮತ, ಸಮುದಾಯ ಅಥವಾ ಧರ್ಮದ ಭೇದವಿಲ್ಲದೆ ಎಲ್ಲಾ ಜನರು, ಹೆಂಗಸರು ಕೂಡ ಗರ್ಭಗುಡಿಯೊಳಗೆ ಹೋಗಿ ದೇವಿಯನ್ನು ಪೂಜಿಸಬಹುದು. ಸಾಧ್ಯವಾದರೆ ಜೀವನದಲ್ಲಿ ಒಮ್ಮೆ ಆದಿ ಪರಾಶಕ್ತಿಯ ಧಿವ್ಯ ದರುಷನ ಪಡೆಯಲು ಮರೆಯದಿರಿ.

# ಕಾಮಧೇನು

## ಪ್ರಕೃತಿಯೇ ನಮಗೆ ದಾರಿ ದೀಪ

@ ಕೃಷ್ಣಾಮೃತ



"ತುಂಗಾ ಪಾನಂ ಗಂಗಾ ಸ್ನಾನಂ" ಎಂಬ ಮಾತಿದೆ. ತುಂಗಾ ನದಿ ಸಿಹಿನೀರಿಗೆ ಪ್ರಸಿದ್ಧ. ತುಂಗೆಯು ಪಶ್ಚಿಮ ಘಟ್ಟಗಳ ವರಾಹ ಪರ್ವತದಲ್ಲಿರುವ ಗಂಗಾ ಮೂಲದಲ್ಲಿ ಭದ್ರೆ, ನೇತ್ರೆಯರ ಜೊತೆ ಹುಟ್ಟುತ್ತಾಳೆ. ಅಲ್ಲಿಂದ ಮುಂದೆ ಸಾಗಿ ಕರ್ನಾಟಕದ ಚಿಕ್ಕಮಗಳೂರು ಮತ್ತು ಶಿವಮೊಗ್ಗ ಜಿಲ್ಲೆಗಳ ಮೂಲಕ ಸುಮಾರು 147 ಕಿ.ಮೀ. ದೂರದವರೆಗೆ ಹರಿದು ಶಿವಮೊಗ್ಗ ಜಿಲ್ಲೆಯ ಕೂಡ್ಲಿಯಲ್ಲಿ ಭದ್ರೆಯ ಜೊತೆ ಸಂಗಮವಾಗುತ್ತಾಳೆ. ಇದರ ನಂತರ ತುಂಗಭದ್ರಾ ಎಂಬ ಹೆಸರು ಪಡೆದು ಮುಂದೆ ಹರಿದು ಆಂಧ್ರ ಪ್ರದೇಶದ ಕರ್ನೂಲ್ ಬಳಿ ಕೃಷ್ಣಾ ನದಿಯನ್ನು ಸೇರುತ್ತದೆ. ತುಂಗಭದ್ರ ನದಿಯು ದಕ್ಷಿಣ ಭಾರತದ ಪ್ರಮುಖ ನದಿಗಳಲ್ಲಿ ಒಂದು. ತುಂಗಾ ನದಿಗೆ ಗಾಜನೂರಿನಲ್ಲಿ ಒಂದು ಅಣೆ ಕಟ್ಟನ್ನು ಕಟ್ಟಲಾಗಿದೆ. ಭದ್ರಾ ನದಿಯೊಂದಿಗೆ ಸೇರಿದ ಮೇಲೆ ತುಂಗಭದ್ರಾ ನದಿಗೆ ಹೊಸಪೇಟೆಯಲ್ಲಿ ಇನ್ನೊಂದು ಅಣೆಕಟ್ಟನ್ನು ಕಟ್ಟಲಾಗಿದೆ. ತುಂಗಾ ನದಿಯ ದಡದ ಮೇಲಿರುವ ಒಂದು ಪ್ರಸಿದ್ಧ ಸ್ಥಳವೆಂದರೆ ಶೃಂಗೇರಿ. ತೀರ್ಥಹಳ್ಳಿ ಮತ್ತು ಶಿವಮೊಗ್ಗ ತುಂಗಾ ನದಿಯ ತಟದಲ್ಲಿರುವ ಇತರ ಪ್ರಮುಖ ಪಟ್ಟಣಗಳು. ಕಾಶಿಗಿಂತಲೂ ಗುಲಗಂಜಿಯಷ್ಟು ಪುಣ್ಯಪ್ರಾಪ್ತಿಯಾಗುವ ಕ್ಷೇತ್ರ ಕೂಡಲಿ. ಹೆಸರೇ ಸೂಚಿಸುವಂತೆ ತುಂಗ–ಭದ್ರಾ ನದಿಗಳು ಸಂಗಮವಾಗಿರುವ ಪವಿತ್ರ ಕ್ಷೇತ್ರ ಈ "ಕೂಡಲಿ" ಎಂಬ ಊರು. ನದಿಯ ಎರಡೂ ದಂಡೆಯ ಮೇಲೆ ಕಣ್ಣಾಡಿಸಿದರೆ ಹಸಿರ ಸಿರಿಯ, ಗಿರಿ ಪಂಕ್ತಿಗಳ ಸಾಲು ಸಾಲು. ನದಿಯ ಜುಳು ಜುಳು ಕಲರವ ಮನಸ್ಸಿಗೆ ಒಂದು ರೀತಿಯ ಆಹ್ಲಾದವನ್ನು ತರುತ್ತದೆ. ತುಂಗಾಭದ್ರಾ ನದಿ ತಟದಲ್ಲಿ ಅನೇಕ ಪುಣ್ಯ ಕ್ಷೇತ್ರಗಳಿವೆ. ಅದರಲ್ಲಿ ರಾಮೇಶ್ವರ ದೇವಾಲಯವೂ ಒಂದು. ಇದು ಹೊಯ್ಸಳ ಶೈಲಿಯ ದೇವಾಲಯವಾಗಿದ್ದು, ಇಲ್ಲಿರುವ ಲಿಂಗವನ್ನು ಶ್ರೀ ರಾಮನೇ ಬಂದು ಪ್ರತಿಷ್ಠೆ ಮಾಡಿದನೆಂಬ ಪ್ರತೀತಿ ಇದೆ. ಶ್ರೀಚಿಂತಾಮಣಿ ನರಸಿಂಹ ದೇವಸ್ಥಾನವೂ ಕೂಡ ಪುರಾಣ ಕಾಲದಲ್ಲಿ ಪ್ರತಿಷ್ಠೆಯಾದ ದೇವಸ್ಥಾನ ಎನ್ನಲಾಗುತ್ತದೆ. ಕೂಡಲಿಯಮುಖ್ಯ ಪ್ರವೇಶದಲ್ಲಿ ಕಾಣುವ ಶ್ರೀ ಬ್ರಹ್ಮೇಶ್ವರ ದೇವಾಲಯವೂ ಪ್ರಸಿದ್ಧ ದೇವಾಲಯವಾಗಿದೆ. ಶ್ರೀ ಶಂಕರಚಾರ್ಯರಿಂದ ಪ್ರತಿಷ್ಠಾಪಿಸಲ್ಪಟ್ಟಿರುವ ಶಾರದಾ ದೇವಸ್ಥಾನ ಹಾಗೂ ಶಂಕರಮಠವೂ ಇಲ್ಲಿದೆ. ಇಲ್ಲಿ ಮುಖ್ಯವಾಗಿ ಮಕ್ಕಳಿಗೆ "ಅಕ್ಷರಾಭ್ಯಾಸ" ಮಾಡಲಾಗುತ್ತದೆ. ವಿಜಯನಗರ ಅರಸರ ಕಾಲದ ಐತಿಹಾಸಿಕ ಸ್ಥಳ. 1336ರಿಂದ 1565ರವರೆಗೆ ಇದು ವಿಜಯನಗರ ಸಾಮ್ರಾಜ್ಯದ ರಾಜಧಾನಿ ಆಗಿದ್ದ ಹಂಪೆಯು ಇರುವುದು ತುಂಗಭದ್ರ ತಟದಲ್ಲಿ. ಹಂಪೆಯ ಮೊದಲನೆ ಹೆಸರು 'ಪಂಪಾ' ಎಂದಿತ್ತು. ಅಂದರೆ ತುಂಗಭದ್ರ ನದಿ ಎಂದರ್ಥ. ವರ್ಷಗಳು ಕಳೆದಂತೆ ಇದು 'ವಿಜಯನಗರ' ಮತ್ತು 'ವಿರುಪಾಕ್ಷಪುರ' ಎಂದು ಕರೆಯಲ್ಪಟ್ಟಿತ್ತು. ಹಂಪೆಯನ್ನು ಯುನೆಸ್ಕೋ ವಿಶ್ವ ಪರಂಪರೆಯ ತಾಣ ಎಂದು ಘೋಷಿಸಿದೆ. ವಿಜಯ ನಗರ ಸಾಮ್ರಾಜ್ಯದ ಒಡೆಯನಾದ ಕೃಷ್ಣದೇವರಾಯನ ಕಾಲದಲ್ಲಿ ಹಂಪೆ ಬಜಾರ್ ಎಂದೆನ್ನಿಸಿಕೊಂಡ ಬೀದಿಯಲ್ಲಿ ವಜ್ರಾಭರಣಗಳನ್ನು ತೂಕದ ಮಾದರಿಯಲ್ಲಿ ಮಾರಲ್ಪಡುತ್ತಿದ್ದರಂತೆ. ಕೃಷ್ಣದೇವರಾಯನ ರಾಜ್ಯಭಾರ ಮುಗಿದ ನಂತರ ವಿಜಯನಗರ ಸಾಮ್ರಾಜ್ಯ ತನ್ನ ಪ್ರಾಬಲ್ಯವನ್ನು ನಿಧಾನವಾಗಿ ಕಳೆದುಕೊಳ್ಳುತ್ತಾ ಬಂತು. ಕೊನೆಗೆ ತಾಳೀಕೋಟೆಯ ಯುದ್ಧದಲ್ಲಿ ಮುಸ್ಲಿಂ ಸಾಮ್ರಾಜ್ಯದಿಂದ ಬಂದ ಆಕ್ರಮಣವನ್ನು ತಡೆಯದೆ ಅಂತ್ಯಗೊಂಡಿತು. ಹಂಪೆಯಲ್ಲಿದ್ದ ಅನೇಕ ಸ್ಮಾರಕಗಳನ್ನು ಸುಮಾರು ಆರು ತಿಂಗಳುಗಳ ಕಾಲ ಸೈನಿಕರು ನಾಶ ಮಾಡಿದರು ಎನ್ನುತ್ತದೆ ಇತಿಹಾಸ. ಇಂದು ವಿರೂಪಾಕ್ಷ ದೇವಾಲಯ, ಹಜಾರ ರಾಮ ದೇವಸ್ಥಾನ, ಸಪ್ತಸ್ವರ ಸಂಗೀತ ಹೊರಹೊಮ್ಮಿಸುವ ಕಲ್ಲಿನ ಕಂಭಗಳು, ವಿಶ್ವವಿಖ್ಯಾತ ಕಲ್ಲಿನ ರಥ, ಮಹಾನವಮಿ ದಿಬ್ಬ, ಸಾಸಿವೆ ಕಾಳು ಗಣಪತಿ, ಉಗ್ರ ನರಸಿಂಹ, ಕಮಲ ಮಹಲ್, ಬಡವಿ ಲಿಂಗ, ಅನೆ ಲಾಯ ಹೀಗೆ ಹಲವಾರು ಪ್ರೇಕ್ಷಣಿಯ ಸ್ಥಳಗಳನ್ನು ಇಂದಿಗೂ ಹಂಪಿಯಲ್ಲಿ ನೋಡಬಹುದಾಗಿದೆ. ಹೀಗೆ 380 ಕಿ.ಮಿ.ನಷ್ಟು ಕರ್ನಾಟಕದಲ್ಲಿ ಹರಿದು ಮುಂದೆ ತೆಲಂಗಾಣ ಪ್ರವೇಶಿಸಿ ಒಟ್ಟು ಸುಮಾರು 600 ಕಿ.ಮಿ.ಗಷ್ಟು ಸಾಗಿ ಕೃಷ್ಣೆಯೊಂದಿಗೆ ಬಂಗಾಳಕೊಲ್ಲಿ ಸೇರುತ್ತಾಳೆ ತುಂಗೆ.

# ಕಲ್ಪವೃಕ್ಷ

@ಪ್ರೀತಂ ರೈ ಇ

## ಸುಬೇದಾರ್ ಶ್ರೀಧರ ದಾಸ್

ಡಿಸೆಂಬರ್ 1971 ರಲ್ಲಿ, ಪಾಕಿಸ್ತಾನದ ಸೈನ್ಯವು ದೇಶದ ಪೂರ್ವ ಭಾಗದಲ್ಲಿ ನಡೆಸಿದ ನರಮೇಧವು ಲಕ್ಷಾಂತರ ನಿರಾಶ್ರಿತರ ಅಭೂತಪೂರ್ವ ಒಳಹರಿವಿಗೆ ಕಾರಣವಾದ ಕಾರಣ ಭಾರತವು ಪಾಕಿಸ್ತಾನದೊಂದಿಗೆ ಯುದ್ಧಕ್ಕೆ ಹೋಗಬೇಕಾಯಿತು. ಭಾರತವು ತನ್ನ ಪೂರ್ವ ಮತ್ತು ಪಶ್ಚಿಮ ಮತ್ತು ಉತ್ತರ ರಂಗಗಳಲ್ಲಿ ಯುದ್ಧವನ್ನು ಮಾಡಬೇಕಾಗಿತ್ತು, ಇದು ಹೊಸ ದೇಶವಾದ ಬಾಂಗ್ಲಾದೇಶದ ವಿಮೋಚನೆಯಲ್ಲಿ ಕೊನೆಗೊಂಡಿತು. ಪಶ್ಚಿಮ ಮುಂಭಾಗದಲ್ಲಿ, ಸುಬೇದಾರ್ ಶ್ರೀಧರ ದಾಸ್ ಘಟಕ 18 ಮದ್ರಾಸ್‌ನ್ನು, ರಾಜಸ್ಥಾನದ ನಯಾಚೋರ್/ಉಮರ್ಕೋಟ್ ಸೆಕ್ಟರ್‌ನಲ್ಲಿ ನಿಯೋಜಿಸಲಾಗಿತ್ತು. 1971 ರ ಡಿಸೆಂಬರ್ 16 ರಂದು ಪೂರ್ವ ಗಡಿಯಲ್ಲಿ ಪಾಕಿಸ್ತಾನಿ ಪಡೆಗಳು ಶರಣಾದಾಗ ಯುದ್ಧವು ಅಧಿಕೃತವಾಗಿ ಕೊನೆಗೊಂಡರೂ, ಪಶ್ಚಿಮ ಗಡಿಯಲ್ಲಿ ಗಡಿ ಚಕಮಕಿಯು ಮುಂದುವರೆಯಿತು. 16 ಡಿಸೆಂಬರ್ 1971 ರ ಹೊತ್ತಿಗೆ, 18 ಮದ್ರಾಸ್ ಉಮರ್ಕೋಟ್‌ನಿಂದ ಸುಮಾರು 2 ಕಿಲೋಮೀಟರ್ ದೂರದಲ್ಲಿರುವ ಹಿಂಗೋರಾ ಟಾರ್‌ನಲ್ಲಿ ಸ್ಥಾನಗಳನ್ನು ತಲುಪಿತು. ಶ್ರೀಧರ ದಾಸ್ ಮತ್ತು ಅವರ ಜನರು ಟ್ರ್ಯಾಕ್‌ಗಳಿಲ್ಲದ ಮರುಭೂಮಿಯ ಮೂಲಕ ಸುಮಾರು ಮೂರು ದಿನಗಳ ನಡಿಗೆಯ ನಂತರ ಹಿಂಗೋರಾ ತಾರ್ ತಲುಪಿದ್ದರು. ಬೆಟಾಲಿಯನ್ ಫಿರಂಗಿ ಅಥವಾ ಆಡಳಿತಾತ್ಮಕ ಹೊದಿಕೆಯನ್ನು ಹೊಂದಿರಲಿಲ್ಲ ಮತ್ತು ಆಹಾರ ಮತ್ತು ಯುದ್ಧಸಾಮಗ್ರಿಗಳ ಕೊರತೆಯನ್ನು ಎದುರಿಸಿತು. ಆದರೆ ಫಿರಂಗಿ ಕವರ್ ಮತ್ತು ವಾಯು ಬೆಂಬಲದ ಕೊರತೆಯ ಹೊರತಾಗಿಯೂ ಶ್ರೀಧರ ದಾಸ್ ಮತ್ತು



ಅವರ ಸೈನಿಕರಿಗೆ ಧೈರ್ಯ ಮತ್ತು ದೃಢತೆಯ ಕೊರತೆ ಇರಲಿಲ್ಲ. 1971 ರ ಡಿಸೆಂಬರ್ 17 ರ ನಸುಕಿನಲ್ಲಿ, ಶತ್ರುಗಳು ಬೃಹತ್ ದಾಳಿಯನ್ನು ಪ್ರಾರಂಭಿಸಿದರು ಮತ್ತು ಶ್ರೀಧರ ದಾಸ್ ಪ್ಲಟೂನ್ ಕಮಾಂಡರ್ ಆಗಿ, ತಮ್ಮ ವೈಯಕ್ತಿಕ ಸುರಕ್ಷತೆಯ ಬಗ್ಗೆ ಯೋಚಿಸದೆ, ಕಂದಕದಿಂದ ಕಂದಕಕ್ಕೆ ತೆರಳಿ ದಾಳಿಯನ್ನು ಹಿಮ್ಮೆಟ್ಟಿಸಲು ತಮ್ಮ ಸೈನಿಕರನ್ನು ಪ್ರೋತ್ಸಾಹಿಸಿದರು. ಈ ಪ್ರಕ್ರಿಯೆಯಲ್ಲಿ ಅವರು ಗಂಭೀರವಾಗಿ ಗಾಯಗೊಂಡರು. ಸ್ವಲ್ಪ ಸಮಯದ ನಂತರ ಶತ್ರುಗಳು ಮತ್ತೊಂದು ದಾಳಿಯ ಅಲೆಯನ್ನು ಪ್ರಾರಂಭಿಸಿದರು. LMG ಯ ಸಿಬ್ಬಂದಿಯೊಬ್ಬರು ಕೊಲ್ಲಲ್ಪಟ್ಟಿರುವುದನ್ನು ಗಮನಿಸಿದ ಶ್ರೀಧರ ದಾಸ್ ಅವರು ಒಳಬರುವ ಶತ್ರು ಸೈನಿಕರ ಮೇಲೆ ದಾಳಿ ಮಾಡಿದರು. ಆದಾಗ್ಯೂ, ಗುಂಡಿನ ಚಕಮಕಿಯ ಸಮಯದಲ್ಲಿ, ಸುಬೇದಾರ್ ಶ್ರೀಧರ ದಾಸ್ ತೀವ್ರವಾಗಿ ಗಾಯಗೊಂಡು ಹುತಾತ್ಮರಾದರು. ಶ್ರೀಧರ ದಾಸ್ ಅವರು ಕಾರ್ಯಾಚರಣೆಯ ಸಮಯದಲ್ಲಿ ಅತ್ಯಂತ ಉನ್ನತ ಮಟ್ಟದ ಶೌರ್ಯ ಮತ್ತು ನಾಯಕತ್ವವನ್ನು ಪ್ರದರ್ಶಿಸಿದರು ಮತ್ತು ತಮ್ಮ ಕರ್ತವ್ಯದ ಸಾಲಿನಲ್ಲಿ ತಮ್ಮ ಪ್ರಾಣವನ್ನು ಅರ್ಪಿಸಿದರು. ಶ್ರೀಧರ ದಾಸ್ ಅವರ ಧೈರ್ಯ, ಹೋರಾಟದ ಮನೋಭಾವ, ಕರ್ತವ್ಯ ನಿಷ್ಠೆ ಮತ್ತು ಅತ್ಯುನ್ನತ ತ್ಯಾಗಕ್ಕಾಗಿ "ವೀರ ಚಕ್ರ" ಶೌರ್ಯ ಪ್ರಶಸ್ತಿಯನ್ನು ನೀಡಲಾಯಿತು. ಸುಬೇದಾರ್ ಶ್ರೀಧರ ದಾಸ್ ಅವರು ಕೇರಳದ ಎರ್ನಾಕುಲಂ ಜಿಲ್ಲೆಯ ಮಣಕ್ಕಾಡ್ ಗ್ರಾಮದಲ್ಲಿ ಶ್ರೀ ಪರಮೇಶ್ವರ ಪಣಿಕ್ಕರ್ ಮತ್ತು ಶ್ರೀಮತಿ ಕಾರ್ತಿಯಾಯನಿಯವರ ಪುತ್ರನಾಗಿ 29 ಜನವರಿ 1934 ರಂದು ಜನಿಸಿದರು. ಶ್ರೀಧರ ದಾಸ್ ಅವರು 17 ನೇ ವಯಸ್ಸಿನಲ್ಲಿ ಸೈನ್ಯಕ್ಕೆ ಸೇರಿದರು ಮತ್ತು ಮದ್ರಾಸ್ ರೆಜಿಮೆಂಟ್‌ನ 18 ಮದ್ರಾಸ್ ಬೆಟಾಲಿಯನ್‌ಗೆ ಸೇರ್ಪಡೆಗೊಂಡರು. 1971 ರ ಯುದ್ಧದ ಸಮಯದಲ್ಲಿ, ಶ್ರೀಧರ ದಾಸ್ ಅವರ ಘಟಕ, 18 ಮದ್ರಾಸ್ ಅನ್ನು ಪಶ್ಚಿಮ ಮುಂಭಾಗದಲ್ಲಿರುವ ನಯಾಚೋರ್ / ಉಮರ್ಕೋಟ್ ಸೆಕ್ಟರ್‌ನಲ್ಲಿ ನಿಯೋಜಿಸಲಾಯಿತು. ಇವರಿಗೆ ಕರಾವಳಿ ತರಂಗಿಣಿ ತಲೆಬಾಗಿ ನಮಿಸುತ್ತದೆ.

# ಪಾರಿಜಾತ

## ಕರಾವಳಿ ತರಂಗಿಣಿ

ಒಂದು ಮನೆಯಲ್ಲಿ ಹುಟ್ಟಿ ಇನ್ನೊಂದು ಮನೆ ಬೆಳಗುವ ಹೆಣ್ಣು ತನ್ನ ಜೀವನದ ಹಾದಿಯಲ್ಲಿ ಹಲವಾರು ಎಡರು ತೊಡರುಗಳನ್ನು ಎದುರಿಸಿ ತನ್ನ ಆಸೆಗೆ ನೀರೆರೆದು, ಸಾಧನೆಯ ಹಾದಿಯಲ್ಲಿ ನಡೆದು ಇತರ ಹೆಣ್ಣು ಮಕ್ಕಳಿಗೆ ಮಾದರಿಯಾಗುತ್ತಾಳೆ. ಅಂತಹ ಹೆಣ್ಣು ಮಕ್ಕಳಲ್ಲಿ ಕರಾವಳಿ ತರಂಗಿಣಿಯ ಇಂದಿನ ಅತಿಥಿ ಸಿಬಿಐನಲ್ಲಿ "ರೇಡ್ ಶ್ರೀಲೇಖಾ" ಎಂದೇ ಪ್ರಸಿದ್ಧರಾಗಿದ್ದ, ಕೇರಳ ರಾಜ್ಯದ ಮೊದ ಐಪಿಎಸ್ ಅಧಿಕಾರಿ ಆರ್. ಶ್ರೀಲೇಖಾ. ಶ್ರೀಲೇಖಾ ಅವರು 1960 ರ ಕ್ರಿಸ್ಮಸ್ ದಿನದಂದು ಪ್ರೊ. ಎನ್. ವೇಲಾಯುಧನ್ ನಾಯರ್ ಮತ್ತು ಬಿ. ರಾಧಮ್ಮ ಅವರ ಪುತ್ರಿಯರಲ್ಲಿ ಒಬ್ಬರಾಗಿ ಜನಿಸಿದರು. ಶ್ರೀಲೇಖಾ ಅವರ ತಂದೆ ಪ್ರೊ. ಎನ್. ವೇಲಾಯುಧನ್ ನಾಯರ್ ಅವರು ಮಿತ್ರ ಪಡೆಗಳ ಪರವಾಗಿ ಭಾರತೀಯ ಸೇನೆಯಲ್ಲಿ ಸೈನಿಕರಾಗಿ ಎರಡನೇ ವಿಶ್ವಯುದ್ಧವನ್ನು ಹೋರಾಡಿದ್ದರು. ಶ್ರೀಲೇಖಾ ಅವರು ತಮ್ಮ ಶಾಲಾ ಶಿಕ್ಷಣವನ್ನು ತಿರುವನಂತಪುರದ ಕಾಟನ್ ಹಿಲ್‌ನಲ್ಲಿರುವ ಬಾಲಕಿಯರ ಸರ್ಕಾರಿ ಹೈಯರ್ ಸೆಕೆಂಡರಿ ಶಾಲೆಯಿಂದ ಪೂರ್ಣಗೊಳಿಸಿದರು. ಅಲ್ಲಿ ಅವರು ಸಂಗೀತ, ನಾಟಕ, NCC ಮತ್ತು NSS ನಂತಹ ವಿವಿಧ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದರು. ನಂತರ ಅವರು ತಿರುವನಂತಪುರಂನ ಸರ್ಕಾರಿ ಮಹಿಳಾ ಕಾಲೇಜಿನಲ್ಲಿ ಇಂಗ್ಲಿಷ್ ಸಾಹಿತ್ಯದಲ್ಲಿ ತಮ್ಮ ಸ್ನಾತಕೋತ್ತರ ಪದವಿಯನ್ನು ಪೂರ್ಣಗೊಳಿಸಿದರು. ಅದರ ನಂತರ ಕೇರಳ ವಿಶ್ವವಿದ್ಯಾನಿಲಯದಲ್ಲಿನ ಇನ್‌ಸ್ಟಿಟ್ಯೂಟ್ ಆಫ್ ಇಂಗ್ಲಿಷ್‌ನಲ್ಲಿ ತನ್ನ ಸ್ನಾತಕೋತ್ತರ ಪದವಿಯನ್ನು ಪಡೆದರು. ಪೊಲೀಸ್ ಸೇವೆಗೆ ಸೇರುವ ಮೊದಲು ಶ್ರೀಲೇಖಾ ಅವರು ಶ್ರೀ ವಿದ್ಯಾಧಿರಾಜ ಕಾಲೇಜಿನಲ್ಲಿ ಉಪನ್ಯಾಸಕಿಯಾಗಿ ಕೆಲಸ ಮಾಡುತ್ತಿದ್ದರು. ಅವರು ರಿಸ



ರ್ವ್ ಬ್ಯಾಂಕ್ ಆಫ್ ಇಂಡಿಯಾದಲ್ಲಿ ಗ್ರೇಡ್ ಬಿ ಅಧಿಕಾರಿಯಾಗಿ ಕೆಲಸ ಮಾಡಿದರು ಮತ್ತು ಮುಂಬೈನಲ್ಲಿ ಅಂಕಿ ಅಂಶ ಅಧಿಕಾರಿಯಾಗಿ ನೇಮಕಗೊಂಡರು. ಜನವರಿ 1987 ರಲ್ಲಿ, 26 ನೇ ವಯಸ್ಸಿನಲ್ಲಿ, ಶ್ರೀಲೇಖಾ ಕೇರಳ ಕೇಡರ್‌ನ ಮೊದಲ ಮಹಿಳಾ ಐಪಿಎಸ್ ಅಧಿಕಾರಿಯಾದರು. 2005 ರಲ್ಲಿ, ಸೇವೆಯಲ್ಲಿದ್ದಾಗ, ಅವರು IGNOU ನಿಂದ ಮಾನವ ಸಂಪನ್ಮೂಲ ನಿರ್ವಹಣೆಯಲ್ಲಿ MBA ಪಡೆದರು. ಇವರಿಗೆ ಯುನೈಟೆಡ್ ಕಿಂಗ್‌ಡಮ್ ಸರ್ಕಾರವು ಪ್ರತಿಷ್ಠಿತ ಚೆವೆನಿಂಗ್ ಫೆಲೋಶಿಪ್ ನೀಡಿತು. ಅವರು ಕಿಂಗ್ಸ್ ಕಾಲೇಜ್, ಲಂಡನ್, ಸೈನ್ಸಸ್ ಪೊ ಪ್ಯಾರಿಸ್, ಎಡಿನ್‌ಬರ್ಗ್ ವಿಶ್ವವಿದ್ಯಾಲಯ, ಜಿನೀವಾ ಮತ್ತು ಆಕ್ಸ್‌ಫರ್ಡ್‌ನಲ್ಲಿರುವ ವಿಶ್ವಸಂಸ್ಥೆಯ ಕಚೇರಿಗಳಲ್ಲಿ ಸೆಪ್ಟಂಬರ್‌ನಿಂದ ಡಿಸೆಂಬರ್ 2015 ರವರೆಗೆ ಫೆಲೋಶಿಪ್ ಅಧ್ಯಯನವನ್ನು ಕೈಗೊಂಡರು. ಅವರು 2013 ರಲ್ಲಿ ಲಂಡನ್ ಬ್ಯುಸಿನೆಸ್ ಸ್ಕೂಲ್ ಮತ್ತು ಮೆಟ್ರೋಪಾಲಿಟನ್ ಪೋಲಿಸ್‌ನಲ್ಲಿ ಮಿಡ್–ಕರಿಯರ್ ತರಬೇತಿ ಕಾರ್ಯಕ್ರಮಕ್ಕೆ ಹಾಜರಾಗಿದ್ದರು. ಪೊಲೀಸ್ ಸೇವೆಗೆ ಸೇರಿದ ನಂತರ, ಅವರು ಜಿಲ್ಲೆಗಳಾದ ಅಲಪ್ಪುಳ, ಪತ್ತನಂತಿಟ್ಟ ಮತ್ತು ತ್ರಿಶೂರ್‌ಗಳಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾಗಿ ಸೇವೆ ಸಲ್ಲಿಸಿದ್ದಾರೆ. ಶ್ರೀಲೇಖಾ ಅವರು ಕೇಂದ್ರೀಯ ತನಿಖಾ ದಳದಲ್ಲಿ 4 ವರ್ಷಗಳ ಕಾಲ ಕೇರಳದಲ್ಲಿ ಪೊಲೀಸ್ ಅಧೀಕ್ಷಕರಾಗಿ ಮತ್ತು ನವದೆಹಲಿಯಲ್ಲಿ ಡಿಐಜಿಯಾಗಿ ಕೆಲಸ ಮಾಡಿದ್ದಾರೆ. ನಂತರ ಆಕೆಯನ್ನು ಎರ್ನಾಕುಲಂ ರೇಂಜ್‌ನ ಡೆಪ್ಯುಟಿ ಇನ್ಸ್‌ಪೆಕ್ಟರ್ ಜನರಲ್ ಆಗಿ ಬಡ್ತಿ ನೀಡಲಾಯಿತು. ಶ್ರೀಲೇಖಾ ಅವರು ಡಾ. ಸೇತುನಾಥ್, ಪ್ರೊ. ಪೀಡಿಯಾಟ್ರಿಕ್ ಸರ್ಜರಿ, ವೈದ್ಯಕೀಯ ಕಾಲೇಜು ಆಸ್ಪತ್ರೆ, ತಿರುವನಂತಪುರಂ ಅವರನ್ನು ವಿವಾಹವಾಗಿದ್ದಾರೆ ಮತ್ತು ಒಬ್ಬ ಪುತ್ರ ಗೋಕುಲ್ ಇದ್ದಾರೆ. ಇಂತಹ ಮಹಾನ್ ಸಾಧಕಿಗೆ ಕರಾವಳಿ ತರಂಗಿಣಿ ಶುಭ

# ಮೊದಲು ಗೋರಿ ಕಟ್ತಾರೆ, ಬಳಿಕ ನಮ್ದು ಅಂತಾರೆ: ಸೂಲಿಬೆಲೆ

ಒಂದನೇ ಪುಟದಿಂದ......

ಸ್ಥಳೀಯ ನಿವಾಸಿಗಳಿಗೆ ನೋಟಿಸ್ ನೀಡಿದಾಗ ಆಕ್ರೋಶ ವ್ಯಕ್ತಪಡಿಸಿರೋದ್ರಲ್ಲಿ ತಪ್ಪಿಲ್ಲ. ರಕ್ಷಣಾ ಇಲಾಖೆ, ಸರ್ಕಾರ ಬಿಟ್ರೆ ಅತಿ ಹೆಚ್ಚು ಜಮೀನು ಇರೋದು ವಕ್ಫ್ ಬೋರ್ಡ್ ಬಳಿ. ಈ ಮೂಲಕ ದೇಶ ತುಂಡರಿಸಲು ಬೇಕಾದ ಎಲ್ಲಾ ವ್ಯವಸ್ಥೆ ಅದು ಮಾಡ್ತಿದೆ. ಅದರ ಮುಂದುವರಿದ ಭಾಗವೇ ಈಗ ನಡೆಯುತ್ತಿರುವುದು ಎಂದರು. ಹತ್ತು ಸಾವಿರ ಎಕರೆ ಜಮೀನಿನಲ್ಲಿ ಕೇವಲ ರೈತರು ಮಾತ್ರವಲ್ಲ, ಪ್ರಾಚೀನದೇವಾಲಯ, ಶಾಲೆ ಎಲ್ಲವೂ ಸೇರಿದೆ. ಹೀಗೆ ಮಾಡಿಯೇ ವಕ್ಫ್ ಬೋರ್ಡ್‌ಅಷ್ಟೊಂದು ಪ್ರಮಾಣದ ಆಸ್ತಿ ಹೆಚ್ಚಿಸಿಕೊಂಡಿರುವುದು. ಲಕ್ಷಗಟ್ಟಲೇ ಎಕರೆ ಜಾಗ ದಾನದಿಂದ ಬರುತ್ತದೆ ಎಂದರೆ ನಂಬಲು ಸಾಧ್ಯವೇ? ಈಗಿನಿಂದಲೇ ಹೋರಾಟ ಮಾಡ್ಬೇಕು, ಇಲ್ಲದಿದ್ರೆ ಮುಂದೆ ಪರಿಣಾಮ ಕೆಟ್ಟದಾಗಲಿದೆ ಎಂದರು. ಅಗತ್ಯ ಬಿದ್ರೆ ವಿಜಯಪುರಕ್ಕೆ ತೆರಳಿ ಹೋರಾಟ ಮಾಡುತ್ತೇವೆ ಎಂದರು.

# ಮಾನಸಿಕ ಅಸ್ವಸ್ಥರ ಮೇಲೆ ದಯೆ ಇರಲಿ: ಶೋಭಾ ಬಿ.ಜಿ

ಒಂದನೇ ಪುಟದಿಂದ......

ಮಾನಸಿಕ ಆರೋಗ್ಯ ಏರು ಪೇರಾದರೆ ಯಾರೂ ಗಮನ ಹರಿಸುವುದಿಲ್ಲ. ಮಾನಸಿಕ ಅಸ್ವಸ್ಥತೆಯನ್ನು ಸುಧಾರಿಸಲು ಯಾವ ರೀತಿಯ ಕ್ರಮ ತೆಗೆದುಕೊಳ್ಳಬೇಕು. ಅವರಿಗೆ ಬೇಕಾದ ಕಾನೂನು ರೀತಿಯ ತಿಳಿವಳಿಕೆ ಸಮಾಜದ ಎಲ್ಲರಲ್ಲೂ ಇರಬೇಕು. ಈ ನಿಟ್ಟಿನಲ್ಲಿ ಕಾನೂನು ಪ್ರಾಧಿಕಾರ ಎಲ್ಲಾ ರೀತಿಯ ಸಹಾಯ, ಸಹಕಾರ ನೀಡಲು ಬದ್ಧವಾಗಿದೆ ಎಂದರು.

# ಕಾಂತಾರಕ್ಕೂ ಮುಂಚೆ ಸಿನಿಮಾಗಳಲ್ಲಿ ದೈವರಾಧನೆ ಇತ್ತು–ರಿಷಬ್

ಒಂದನೇ ಪುಟದಿಂದ......

ನಾನು ಗುತ್ತಿನ ಮನೆಯವನಾಗಿ ದೈವವನ್ನು ನಂಬಿಕೆ ಇಟ್ಟುಕೊಂಡು ಪೂಜೆ ಮಾಡಿಕೊಂಡು ಬರುವವನು. ನಾವು ಸಿನಿಮಾ ಮಾಡಬೇಕಾದರೆ ದೈವಕಟ್ಟುವ ಸಮುದಾಯದವರ ಸಹಾಯ ಪಡೆದು ಮಾಡಿದ್ದೇವೆ. ಅಷ್ಟು ಶ್ರದ್ಧೆಯಿಂದ ಅದನ್ನು ಮಾಡಿಕೊಂಡು ಬಂದಿದ್ದೇವೆ. ನಮಗೆ ಕೇವಲ ಅದೊಂದು ಸಿನಿಮಾ ಅಲ್ಲ. ದೈವದ ಸೇವೆ ಅನ್ನೋ ರೀತಿ ಮಾಡಿಕೊಂಡು ಬಂದಿದ್ದೇವೆ. ಹೊರಗಿನವರು ಇದನ್ನು ಅಪಹಾಸ್ಯ ಮಾಡಿದಾಗ ನಂಬಿದವರಿಗೆ ಬೇಸರವಾಗುವುದು ಸಹಜ. ಯಾರೂ ದೈವವನ್ನು ಸ್ಟೇಜ್ ಮೇಲೆ ಅನುಕರಣೆ ಮಾಡಬೇಡಿ ಎಂದು ಮನವಿ ಮಾಡಿದ್ದೇನೆ ಎಂದು ರಿಷಬ್ ಶೆಟ್ಟಿ ಹೇಳಿದರು. ರಾಷ್ಟ್ರಪ್ರಶಸ್ತಿ ಸ್ವೀಕರಿಸಿ ಮಂಗಳೂರಿಗೆ ಮೊದಲ ಬಾರಿಗೆ ಆಗಮಿಸಿದ ಅವರಿಗೆ ಮಂಗಳೂರು ವಿಮಾನ ನಿಲ್ದಾಣದಲ್ಲಿ ಅದ್ದೂರಿ ಸ್ವಾಗತ ದೊರಕಿತು. ಬಳಿಕ ಮಾದ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಕಾಂತಾರ ಮಂಗಳೂರಿನಲ್ಲಿ ಶುರುವಾದ ಸಿನಿಮಾ. ಪ್ರಶಸ್ತಿ ಪಡೆದುಇಲ್ಲಿಗೆ ಬರುವಂತಾಗಿದ್ದು ನನ್ನ ಪುಣ್ಯ ಎಂದು ಭಾವಿಸುತ್ತೇನೆ. ಈ ಪ್ರಶಸ್ತಿಯನ್ನು ದೈವಕ್ಕೆ, ದೈವ ನರ್ತಕರಿಗೆ ಹಾಗೂ ಅಪ್ಪು ಸರ್‌ಗೆ ಸಮರ್ಪಿಸುತ್ತೇನೆ. ಈ ಪ್ರಶಸ್ತಿಯನ್ನು ದೈವದ ಪಾದಕ್ಕೆ ಇಟ್ಟು ನನ್ನ ಕೆಲಸ ಮುಂದುವರೆಸುತ್ತೇನೆ ಎಂದು ಹೇಳಿದರು. ನ್ಯಾಷನಲ್ ಅವಾರ್ಡ್ ನಮ್ಮ ಇಡೀ ತಂಡಕ್ಕೆ ಸಲ್ಲಬೇಕು. ದೈವದ ಆಶೀರ್ವಾದವಿಲ್ಲವಾದರೆ ಸಿನಿಮಾ ಈ ಮಟ್ಟಕ್ಕೆ ಹೋಗುತ್ತಿರಲಿಲ್ಲ. ಸಿನಿಮಾ ಮಾಡುವಾಗ ಅವಾರ್ಡ್ ಬರುತ್ತದೆಂದುಕೊಂಡಿರಲಿಲ್ಲ. ಎಲ್ಲಾ ಜನರ ಪ್ರೀತಿಯಿಂದ ಸಾಧ್ಯವಾಗಿದೆ. ಕಾಂತಾರ ಶೂಟಿಂಗ್ ನಡೆಯುತ್ತಿದೆ ಆದಷ್ಟು ಬೇಗ ನಿರ್ಮಾಪಕರು ರಿಲೀಸ್ ಡೇಟ್ ಅನೌನ್ಸ್ ಮಾಡ್ತಾರೆ. ಕಾಂತಾರ ಒನ್ ಬಹಳ ಚೆನ್ನಾಗಿ ಮೂಡಿ ಬರುತ್ತಿದೆ. ಈ ಹಿಂದೆ ಕಾಂತಾರಕ್ಕೆ ಎಷ್ಟು ಹೆಮ್ಮೆ ಪಟ್ಟಿದ್ದೀರೋ ಅದಕ್ಕಿಂತ ಹೆಚ್ಚು ಹೆಮ್ಮೆ ಪಡುತ್ತೀರ ಎಂದು ರಿಷಭ್ ಶೆಟ್ಟಿ ಹೇಳಿದರು.

# ಉದ್ಯೋಗಾವಕಾಶ : ಸಂದರ್ಶನ

ಮಂಗಳೂರು – ಗ್ಲೋ ಟಚ್ ಟೆಕ್ನಾಲಜಿ ಪ್ರೈವೇಟ್ ಲಿಮಿಟೆಡ್ ವತಿಯಿಂದ ಗ್ರಾಜುಯೇಟ್ ಇಂಜಿನಿಯರಿಂಗ್ ಟ್ರೈನಿಂಗ್ ಹುದ್ದೆಗೆ ನೇರ ಸಂದರ್ಶನವನ್ನು ಅಕ್ಟೋಬರ್ 16ರಂದು ಗ್ಲೋ ಟಚ್ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್, ಕಿಂಗ್ಸ್ ಪಾರ್ಕ್ ಲೇಔಟ್, ಮೇರಿ ಹಿಲ್ ರಾಣಿಪುರ ಉಳ್ಳಿಯ, ಕಾವೂರು ಮಂಗಳೂರು ಇಲ್ಲಿ ಆಯೋಜಿಸಲಾಗಿದೆ. ಅರ್ಹತೆ ಹೊಂದಿದ ಆಸಕ್ತ ಅಭ್ಯರ್ಥಿಗಳು ಸ್ವ ವಿವರವುಳ್ಳ ಬಯೋಡೇಟಾದೊಂದಿಗೆ ನೇರ ಸಂದರ್ಶನದಲ್ಲಿ ಭಾಗವಹಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ..

# ಮತಗಟ್ಟೆ ಅಧಿಕಾರಿಗಳಿಗೆ ತರಬೇತಿ

ಮಂಗಳೂರು–ವಿಧಾನಪರಿಷತ್ ದಕ್ಷಿಣ ಕನ್ನಡ ಸ್ಥಳೀಯ ಪ್ರಾಧಿಕಾರ ಕ್ಷೇತ್ರದಿಂದ ನಡೆಯುವ ಉಪಚುನಾವಣಾ ಕರ್ತವ್ಯಕ್ಕೆ ನೇಮಕಗೊಂಡ ಪಿಆರ್‌ಓ ಮತ್ತು ಎಪಿಆರ್‌ಓಗಳಿಗೆ ಮೈಕ್ರೋ ವೀಕ್ಷಕರ ತರಬೇತಿ ಕಾರ್ಯಕ್ರಮ ಅಕ್ಟೋಬರ್ 18ರಂದು ನಡೆಯಲಿದೆ. ಪುತ್ತೂರು ಉಪ ವಿಭಾಗ ವ್ಯಾಪ್ತಿಗೆ ಅಕ್ಟೋಬರ್ 18ರಂದು ಬೆಳಿಗ್ಗೆ 10:30 ರಿಂದ 1–00ಗಂಟೆಯ ವರೆಗೆ ಪುತ್ತೂರು ಪುರಭವನದಲ್ಲಿ, ಮಂಗಳೂರು ಉಪ ವಿಭಾಗಕ್ಕೆ ಬೆಳಿಗ್ಗೆ 10.30ರಿಂದ ಮಧ್ಯಾಹ್ನ 12 ಗಂಟೆಯವರೆಗೆ ಜಿಲ್ಲಾ ಪಂಚಾಯತ್ ನೇತ್ರಾವತಿ ಸಭಾಂಗಣದಲ್ಲಿ ತರಬೇತಿ ನಡೆಯಲಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಎಂ.ಪಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪಸಂಖ್ಯಾತ ವಿದ್ಯಾರ್ಥಿಗಳ ಫೆಲೋಶಿಪ್ : ಅರ್ಜಿ ಆಹ್ವಾನ

ಮಂಗಳೂರು – ಜಿಲ್ಲೆಯಲ್ಲಿ 2024–25ನೇ ಸಾಲಿನಲ್ಲಿ ಪಿಎಚ್.ಡಿ ಸಂಶೋಧನ ಮಾಡುತ್ತಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳ ಫೆಲೋಶಿಪ್‌ಗೆ ಅರ್ಜಿ ಸಲ್ಲಿಸಲು ಅಕ್ಟೋಬರ್ 31ರವರೆಗೆ ಅವಧಿ ವಿಸ್ತರಿಸಲಾಗಿದೆ. ರಾಜ್ಯದ ಅಂಗೀಕೃತ ವಿಶ್ವವಿದ್ಯಾಲಯಗಳಲ್ಲಿ ಪೂರ್ಣಕಾಲಿಕವಾಗಿ ಪಿಎಚ್.ಡಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ 3 ವರ್ಷಗಳ ಅವಧಿಗೆ ಜೆ.ಆರ್.ಎಫ್ ಮಾದರಿಯಲ್ಲಿ ಫೆಲೋಶಿಪ್ ನೀಡಲಾಗುತ್ತದೆ. ಸೇವಾಸಿಂಧು ಪೋರ್ಟಲ್ https://sevasindhuservices.karnataka.gov.in/ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಬೇಕು.

# ಕುರಿಗಾಹಿಗಳಿಗೆ ಗುರುತಿನ ಚೀಟಿ : ಅರ್ಜಿ ಆಹ್ವಾನ

ಶಿವಮೊಗ್ಗ : ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮವು ವಲಸೆ ಕುರಿಗಾಹಿಗಳಿಗೆ ಗುರುತಿನ ಚೀಟಿ ವಿತರಿಸುವ ಯೋಜನೆಯನ್ನು ಅನುಷ್ಠಾನಗೊಳಿಸುತ್ತಿದ್ದು, ಜಿಲ್ಲೆಯಲ್ಲಿ 20 ಕ್ಕೂ ಹೆಚ್ಚು ಕುರಿ/ಮೇಕೆಗಳನ್ನು ಹೊಂದಿರುವ ಅರ್ಹ ವಲಸೆ ಕುರಿಗಾಹಿಗಳಿಂದ ಅರ್ಜಿ ಆಹ್ವಾನಿಸಿದೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರ ಪಶು ಚಿಕಿತ್ಸಾಲಯ, ಪಶು ಆಸ್ಪತ್ರೆಯ ಪಶು ವೈದ್ಯಾಧಿಕಾರಿಗಳು, ಆಯಾ ತಾಲ್ಲೂಕಿನ ಪಶು ಆಸ್ಪತ್ರೆಯ ಮುಖ್ಯ ಪಶುವೈದ್ಯಾಧಿಕಾರಿ ಅಥವಾ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಸಹಾಯಕ ನಿರ್ದೇಶಕರನ್ನು ಸಂಪರ್ಕಿಸುವಂತೆ ನಿಗಮದ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಪ್ರೋತ್ಸಾಹಧನ ಪಡೆಯಲು ಅರ್ಜಿ ಆಹ್ವಾನ

ಶಿವಮೊಗ್ಗ : ಶಿವಮೊಗ್ಗ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಜಿಲ್ಲೆಯಲ್ಲಿನ ಸೆರೆಬ್ರಲ್ ಪಾಲ್ಸಿ, ಮಸ್ಕುಲರ್ ಡೈಸ್ಟ್ರೋಫಿ, ಪಾರ್ಕಿನ್‌ಸನ್ಸ್ ಮತ್ತು ಮಲ್ಟಿಪಲ್ ಸ್ಕ್ಲೆರೋಸಿಸ್ ಕಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಗಳ ಆರೈಕೆದಾರರಿಗೆ ರೂ. 1000/–ಗಳ ಪ್ರೋತ್ಸಾಹಧನವನ್ನು ನೀಡುವ ಯೋಜನೆಯಡಿ ಅರ್ಜಿ ಆಹ್ವಾನಿಸಿದೆ. ಹೆಚ್ಚಿನ ಮಾಹಿತಿಗಾಗಿ –9880972583, 8746997896, 7899137243, 9741161346, 9535247757, 9110493122, 9480767638, 9731922693 ಗಳನ್ನು ಸಂಪರ್ಕಿಸುವುದು.

# ತಾಂತ್ರಿಕ ವ್ಯವಸ್ಥಾಪಕರ ಹುದ್ದೆಗೆ ಅರ್ಜಿ ಆಹ್ವಾನ

ಮಡಿಕೇರಿ–ಕೊಡಗು ಜಿಲ್ಲೆ ಕೃಷಿ ಇಲಾಖೆಯ ಕೃಷಿ ತಂತ್ರಜ್ಞಾನ ನಿರ್ವಹಣಾ ಸಂಸ್ಥೆ (ಆತ್ಮ) ಯೋಜನೆಯಡಿ ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕರ 1 ಹುದ್ದೆಗೆ ಒಪ್ಪಂದದ ಆಧಾರದ ಮೇಲೆ 2024–25ನೇ ಸಾಲಿನ ಸೀಮಿತ ಅವಧಿಗೆ ಸಹಾಯಕ ಕೃಷಿ ನಿರ್ದೇಶಕರ ಕಚೇರಿ, ವಿರಾಜಪೇಟೆ ತಾಲ್ಲೂಕಿನಲ್ಲಿ ಖಾಲಿ ಇರುವ ಹುದ್ದೆಗೆ ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ. ಗರಿಷ್ಠ 45 ವರ್ಷದೊಳಗಿರಬೇಕು. ಮಾಸಿಕ ರೂ. 30 ಸಾವಿರ ಗೌರವ ಧನ ನೀಡಲಾಗುವುದು. ಈ ಹುದ್ದೆಗೆ ಅರ್ಹರಿರುವ ಅಭ್ಯರ್ಥಿಗಳು ಅಕ್ಟೋಬರ್, 21 ರೊಳಗೆ ಅರ್ಜಿ ಸಲ್ಲಿಸಲು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

ಮಡಿಕೇರಿ–ಮಾನವ ಸಂಪನ್ಮೂಲ ಇಲಾಖೆಯ ಅಡಿಯಲ್ಲಿ ನಡೆಯುವ ಜವಾಹರ ನವೋದಯ ವಿದ್ಯಾಲಯದಲ್ಲಿ 2025–26ನೇ ಸಾಲಿಗೆ 9 ಮತ್ತು 11 ನೇ ತರಗತಿಗೆ ಖಾಲಿ ಇರುವ ಸ್ಥಾನಗಳ ಪ್ರವೇಶ ಪಡೆಯಲು ಬಯಸುವ ವಿದ್ಯಾರ್ಥಿಗಳಿಂದ ಆನ್‌ಲೈನ್‌ನಲ್ಲಿ ಅರ್ಜಿಯನ್ನು ಆಹ್ವಾನಿಸಿದ್ದು, ಅರ್ಜಿ ಸಲ್ಲಿಸುವ ದಿನಾಂಕವನ್ನು ಅಕ್ಟೋಬರ್ 30 ರವರೆಗೆ ವಿಸ್ತರಿಸಿದ್ದು, ಅರ್ಹ ಮತ್ತು ಆಸಕ್ತ ವಿದ್ಯಾರ್ಥಿಗಳು ಉಚಿತವಾಗಿ ಅರ್ಜಿ ಸಲ್ಲಿಸಬಹುದು.

# ಗ್ರಾಮ ಪಂಚಾಯತ್ ಸದಸ್ಯರ, ಕಾರ್ಯಕರ್ತರ ಸಭೆ



ಕಾರ್ಕಳ: ತಳಮಟ್ಟದ ಗ್ರಾಮೀಣಾಭಿವೃದ್ಧಿಯ ಗುರಿಸಾಧನೆಗಾಗಿ ಪಂಚಾಯತ್ ರಾಜ್ ವ್ಯವಸ್ಥೆ ಬಲಪಡಿಸ ಬೇಕಾದುದು ಇಂದಿನ ಆಧ್ಯತೆಯಾಗಿದೆ. ಆ ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಯ ಗೆಲುವು ಅನಿವಾರ್ಯವಾಗಿದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ವಿಧಾನ ಪರಿಷತ್ ಸದಸ್ಯ ಮಂಜುನಾಥ ಭಂಡಾರಿ ಹೇಳಿದ್ದಾರೆ. ಕಾಂಗ್ರೆಸ್ ಸಾಮಾಜಿಕ ಕಾಳಜಿಯ ಕಾರ್ಯಸಾಧನೆಯ ಬದ್ಧತೆಯ ಮೇಲೆ ಪಕ್ಷದ ಒಬ್ಬ ನಿಷ್ಠಾವಂತ ಕಾರ್ಯಕರ್ತ ಪಂಚಾಯತ್ ರಾಜ್ ವ್ಯವಸ್ಥೆಯ ಬಗ್ಗೆ ಹಾಗೂ ಸಹಕಾರಿ ಕ್ಷೇತ್ರದ ಬಗ್ಗೆ ಅಪಾರ ಅನುಭವ ಹೊಂದಿರುವ ರಾಜು ಪೂಜಾರಿಯವರನ್ನು ಚುನಾವಣಾ ಕಣಕ್ಕಿಳಿಸಿದೆ. ಗ್ರಾಮ ಪಂಚಾಯತ್ ಸದಸ್ಯನಾಗಿ ಅಧ್ಯಕ್ಷನಾಗಿ, ತಾಲೂಕು ಪಂಚಾಯತ್ ಸದಸ್ಯನಾಗಿ, ಜಿ.ಪಂ.ಸದಸ್ಯ ಅಧ್ಯಕ್ಷನಾಗಿ ಅವಿಭಜಿತ ದ.ಕ ಜಿಲ್ಲೆಯ ಜನರಿಗೆ ನ್ಯಾಯ ಒದಗಿಸಿಕೊಟ್ಟವರು ಎಂದು ಹೇಳಿದರು.

# ಮುಖ್ಯಮಂತ್ರಿಗಳ ಮಧ್ಯ ಪ್ರವೇಶಕ್ಕೆ ಕೋಟ ಒತ್ತಾಯ



ಉಡುಪಿ: ಕರ್ನಾಟಕ ರಾಜ್ಯದ ಸರಿ ಸುಮಾರು 6,000ದಷ್ಟು ಗ್ರಾಮ ಪಂಚಾಯತಿಗಳು ಆಡಳಿತ ವ್ಯವಸ್ಥೆ ಸಿಬ್ಬಂದಿಗಳ ಮುಷ್ಕರದಿಂದಾಗಿ ಸ್ಥಗಿತ ಆಗಿದೆ. ಈ ಹಿನ್ನೆಲೆಯಲ್ಲಿ ತಾವು ಮಧ್ಯಪ್ರವೇಶಿಸಿ, ಗ್ರಾಮೀಣಾಭಿವೃದ್ಧಿ ಸಚಿವರು ಮತ್ತು ಸಿಬ್ಬಂದಿಗಳ ಸಂಘಟನೆಯ ಮುಖಂಡರನ್ನು ಕರೆದು ಸಮಸ್ಯೆ ಬಗೆಹರಿಸಬೇಕೆಂದು ಉಡುಪಿ ಚಿಕ್ಕಮಗಳೂರು ಸಂಸದ ಕೋಟ ಶ್ರೀನಿವಾಸ ಪೂಜಾರಿ ಮುಖ್ಯಮಂತ್ರಿಗಳನ್ನು ಒತ್ತಾಯಿಸಿದ್ದಾರೆ. ರಾಜ್ಯದಲ್ಲಿರುವ ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ಲೆಕ್ಕ ಸಹಾಯಕರು, ನೀರು ಸರಬರಾಜು ಸಿಬ್ಬಂದಿಗಳು, ಸ್ವಚ್ಛತಾ ಕಾರ್ಯಕರ್ತರ ಸಹಿತ ಇಡೀ ಪಂಚಾಯತಿಯ ಕಾರ್ಯಾಂಗ ಕೆಲಸವನ್ನು ಸ್ಥಗಿತಗೊಳಿಸಿ, ಬೆಂಗಳೂರಿನ ಫ್ರೀಡಂ ಪಾರ್ಕ್ ಸೇರಿದಂತೆ, ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಲ್ಲಿ ಪ್ರತಿಭಟನೆ ನಡೆಸುತ್ತಿದ್ದಾರೆ. ಇದರಿಂದಾಗಿ ಪಂಚಾಯತ್‌ನ ಸಣ್ಣಪುಟ್ಟ ಕೆಲಸ ಆಗದಂತಹ ಪರಿಸ್ಥಿತಿ ನಿರ್ಮಾಣ ಆಗಿದೆ ಎಂದು ಹೇಳಿಕೆಯಲ್ಲಿ ತಿಳಿಸಿದ್ದಾರೆ.

# ಗ್ರಾಪಂ ನೌಕರರ ಅನಿರ್ದಿಷ್ಟಾವಧಿ ಧರಣಿ ಮುಷ್ಕರ



ಉಡುಪಿ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಅಧಿಕಾರಿಗಳು ಮತ್ತು ನೌಕರರ ಎಲ್ಲ ವೃಂದ ಸಂಘಗಳು ಹಾಗೂ ಗ್ರಾಮ ಪಂಚಾಯತ್ ಸದಸ್ಯರ ಒಕ್ಕೂಟ ಉಡುಪಿ ಜಿಲ್ಲಾ ಸಮಿತಿಯ ನೇತೃತ್ವದಲ್ಲಿ ಆರ್‌ಡಿಪಿಆರ್ ಕುಟುಂಬದ ವಿವಿಧ ಬೇಡಿಕೆಗಳನ್ನು ಈಡೇರಿಸು ವಂತೆ ಆಗ್ರಹಿಸಿ ಮಣಿಪಾಲದ ರಜತಾದ್ರಿಯಲ್ಲಿರುವ ಉಡುಪಿ ಜಿಪಂ ಕಚೇರಿ ಎದುರು ನಡೆಸುತ್ತಿರುವ ಅನಿರ್ದಿಷ್ಟಾವಧಿ ಧರಣಿ ಮುಷ್ಕರ ಎರಡನೇ ದಿನವಾದ ಮಂಗಳವಾರವೂ ಮುಂದುವರೆದಿದೆ. ಧರಣಿ ಸ್ಥಳಕ್ಕೆ ಆಗಮಿಸಿದ ಉಡುಪಿ ಚಿಕ್ಕಮಗಳೂರು ಸಂಸದ ಕೋಟ ಶ್ರೀನಿವಾಸ ಪೂಜಾರಿ, ವಿಧಾನ ಪರಿಷತ್ ಸದಸ್ಯ ಮಂಜುನಾಥ್ ಭಂಡಾರಿ, ಉಡುಪಿ ಶಾಸಕ ಯಶ್‌ಪಾಲ್ ಸುವರ್ಣ ಹಾಗೂ ಕಾಪು ಶಾಸಕ ಗುರ್ಮೆ ಸುರೇಶ್ ಶೆಟ್ಟಿ, ಕುಂದಾಪುರ ಶಾಸಕ ಕಿರಣ್ ಕೊಡ್ಗಿ, ಮಾಜಿ ಶಾಸಕ ಗೋಪಾಲ ಪೂಜಾರಿ ಅವರಿಗೆ ಧರಣಿ ನಿರತರು ಮನವಿ ಸಲ್ಲಿಸಿದರು.

# ಕೇಂದ್ರ ತನ್ನ ನಿಲುವು ಬದಲಿಸಲಿ: ಸೊರಕೆ



ಕುಂದಾಪುರ : ಕಸ್ತೂರಿ ರಂಗನ್ ವರದಿ ವಿಚಾರವಾಗಿ ಕೇಂದ್ರ ಸರಕಾರ ನಾವು ಈ ಹಿಂದೆ ಕಳುಹಿಸಿದ ತೀರ್ಮಾನವನ್ನು ಒಪ್ಪದೇ, ಅದನ್ನು ಅನುಷ್ಠಾನ ಮಾಡಲೇಬೇಕು ಎಂಬ ಅಭಿಪ್ರಾಯಕ್ಕೆ ಬಂದಿದೆ. ರಾಜ್ಯ ಸರಕಾರ ಈಗಾಗಲೇ ಈ ವರದಿ ಅನುಷ್ಠಾನ ಸಾಧ್ಯವಿಲ್ಲ ಎಂದು ಹೇಳಿದೆ. ಅದೇ ರೀತಿ ಕೇಂದ್ರ ಸರಕಾರವು ತನ್ನ ನಿಲುವನ್ನು ಬದಲಿಸಲಿ. ಜಿಲ್ಲೆಯ ಶಾಸಕರು, ಸಂಸದರು ಜನಾಭಿಪ್ರಾಯವನ್ನು ಕೇಂದ್ರದ ಗಮನಕ್ಕೆ ತರುವಂತಹ ಕಾರ್ಯ ಮಾಡಲಿ ಎಂದು ಮಾಜಿ ಸಚಿವ ವಿನಯ ಕುಮಾರ್ ಸೊರಕೆ ಹೇಳಿದ್ದಾರೆ. ಹಿಂದೆ ಉಸ್ತುವಾರಿ ಸಚಿವನಾಗಿದ್ದ ವೇಳೆ 16 ಗ್ರಾಮಗಳಲ್ಲಿ ಪ್ರತಿಭಟನೆ ನಡೆಸಿ, ಜನರ ಅಭಿಪ್ರಾಯವನ್ನು ಪಡೆದು, ಜಿಲ್ಲೆಯಿಂದ ಈ ವರದಿ ಜಾರಿ ಬೇಡವೆಂದು ಸರಕಾರಕ್ಕೆ ವರದಿ ಸಲ್ಲಿಸಲಾಗಿತ್ತು. ಇತ್ತೀಚೆಗೆ ಅರಣ್ಯ ಸಚಿವರಿಗೂ ಈ ನಾನು ಈ ಬಗ್ಗೆ ಮನವರಿಕೆ ಮಾಡಿದ್ದೇನೆ. ಈ ವರದಿ ಜಾರಿಯಿಂದ ಪಶ್ಚಿಮ ಘಟ್ಟ ತಪ್ಪಲಿನ ಗ್ರಾಮಗಳಲ್ಲಿ ಜನ ವಲಸೆ ಹೋಗುವ ಪರಿಸ್ಥಿತಿಯಿದೆ. ಯಾವುದೇ ಅಭಿವೃದ್ಧಿ ಕಾರ್ಯಗಳು ಆಗಲ್ಲ ಎಂದವರು ತಿಳಿಸಿದರು.

# ಕಾಂಗ್ರೆಸ್‌ಗೆ 3 ಸಾವಿರ ಮತ ಅಗತ್ಯ: ಹೆಗ್ಡೆ



ಬೈಂದೂರು : ಮಾಜಿ ಸಚಿವ ಕೆ.ಜಯಪ್ರಕಾಶ್ ಹೆಗ್ಡೆ ಮಾತನಾಡಿ, ವಿಧಾನಪರಿಷತ್ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಸಮರ್ಥ ಅಭ್ಯರ್ಥಿಯನ್ನು ಗೆಲ್ಲಿಸುವ ಮೂಲಕ ಜಿಲ್ಲೆಯಲ್ಲಿ ಪಕ್ಷ ಇನ್ನಷ್ಟು ಬಲವರ್ಧನೆಗೊಳ್ಳಲು ಸಂಘಟಾನಾತ್ಮಕ ಪ್ರಯತ್ನ ಅಗತ್ಯವಿದೆ, ಕಾಂಗ್ರೆಸ್‌ಗೆ 3 ಸಾವಿರ ಮತ ಅಗತ್ಯ ಎಂದು ತಿಳಿಸಿದರು. ಈ ಚುನಾವಣೆಯಲ್ಲಿ ಬದಲಾವಣೆ ಗಾಳಿ ಬೀಸುತ್ತಿದ್ದು ಹಿಂದುಳಿದ ವರ್ಗದವರಿಗೆ ಸಿದ್ದರಾಮಯ್ಯ ನೇತೃತ್ವದ ಸರಕಾರ ನೀಡಿದ ಕೊಡುಗೆ ಸಹಿತ ಈ ಹಿಂದೆ ಕಾಂಗ್ರೆಸ್ ಸರಕಾರದಲ್ಲಿ ಆದ ಅಭಿವೃದ್ಧಿ ಕಾರ್ಯಕ್ರಮಗಳನ್ನು ಮತವಾಗಿ ಪರಿವರ್ತಿ ಸುವ ಕೆಲಸ ಮಾಡುವ ಮೂಲಕ ನಮ್ಮ ಪಕ್ಷದ ಅಭ್ಯರ್ಥಿಗೆ ಹೆಚ್ಚು ಮತ ಗಳಿಸಿಕೊಡುವಲ್ಲಿ ಶ್ರಮವಹಿಸಬೇಕು ಎಂದರು. ಮಾಜಿ ಸಚಿವ ವಿನಯ್ ಕುಮಾರ್ ಸೊರಕೆ ಮಾತನಾಡಿ, ಜಿಲ್ಲೆಯಲ್ಲಿ ಕಾಂಗ್ರೆಸ್ ಶಾಸಕರಿಲ್ಲ. ಹೀಗಾಗಿ ವಿಧಾನಪರಿಷತ್ ಚುನಾವಣೆಗೆ ಪಕ್ಷ ಆರಿಸಿದ ಅಭ್ಯರ್ಥಿ ಗೆದ್ದು ಬಂದಲ್ಲಿ ಜಿಲ್ಲೆಯ ಪ್ರಗತಿ ಹೆಚ್ಚಲಿದೆ. ವಿಧಾನ ಪರಿಷತ್ ಚುನಾವಣೆಗೆ ಬಿಜೆಪಿ ಆಯ್ಕೆ ಮಾಡಿದ ಅಭ್ಯರ್ಥಿಗೆ ಊರಿನ ಕೆಲಸ ಮಾಡುವ ಅರ್ಹತೆಯೂ ಇಲ್ಲ ಎಂದು ಹೇಳಿದರು.

# ಕನ್ನಡ ಭಾಷೆ, ಸಂಸ್ಕೃತಿ ಉಳಿಸಲು ಪ್ರತಿಯೊಬ್ಬರು ಶ್ರಮಿಸಿ



ಉಡುಪಿ: ಕನ್ನಡ ಭಾಷೆ ನಮ್ಮ ಮಾತೃ ಭಾಷೆಯಾಗಿದ್ದು, ಮುಂದಿನ ಪೀಳಿಗೆಗೆ ಮಾತೃ ಭಾಷೆಯ ಮಹತ್ವದ ಕುರಿತು ಮನ ದಟ್ಟು ಮಾಡುವ ಮೂಲಕ ಕನ್ನಡವನ್ನು ನಮ್ಮ ಉಸಿರಾಗಿಸುವ ಜೊತೆಗೆ ಕನ್ನಡ ಭಾಷೆ ಮತ್ತು ಸಂಸ್ಕೃತಿಯನ್ನು ಉಳಿಸಿ–ಬೆಳೆಸುವಲ್ಲಿ ಪ್ರತಿಯೊಬ್ಬರು ಶ್ರಮಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಕೆ.ವಿದ್ಯಾಕುಮಾರಿ ಕರೆ ನೀಡಿದ್ದಾರೆ. ಮಣಿಪಾಲದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಕರ್ನಾಟಕ ಸಂಭ್ರಮ– 50ರ ಅಂಗವಾಗಿ ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ ಕಾರ್ಯಕ್ರಮದಡಿ ರಾಜ್ಯಾದ್ಯಂತ ಸಂಚರಿಸುತ್ತಿರುವ ಕನ್ನಡ ಜ್ಯೋತಿ ರಥಯಾತ್ರೆಗೆ ಜಿಲ್ಲೆಯಲ್ಲಿ ಸ್ವಾಗತ ಕೋರಿ, ಕನ್ನಡ ತಾಯಿ ಭುವನೇಶ್ವರಿಯ ಪುತ್ಥಳಿಗೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡುತ್ತಿದ್ದರು. ಕನ್ನಡ ಸಾಹಿತ್ಯ ಪರಿಷತ್ತಿನ ಉಡುಪಿ ಜಿಲ್ಲಾಧ್ಯಕ್ಷ ನೀಲಾವರ ಸುರೇಂದ್ರ ಅಡಿಗ ಮಾತನಾಡಿ, ಮನೆಯಲ್ಲಿ ಮಾತೃ ಭಾಷೆಯಾದ ಕನ್ನಡವನ್ನು ಮಾತನಾಡುವುದರೊಂದಿಗೆ, ಮಕ್ಕಳು ಕನ್ನಡ ಪುಸಕ್ತಗಳನ್ನು ಓದುವ ಹವ್ಯಾಸವನ್ನು ಬೆಳೆಸಿಕೊಳ್ಳುವಂತೆ ಪ್ರೇರೇಪಿಸಬೇಕು. ಕನ್ನಡ ಮಾತೃ ಭಾಷೆಯನ್ನು ಕಲಿಕಾ ಮಾಧ್ಯಮವಾಗಿಸಿದಾಗ ಮಾತ್ರವೇ ಕನ್ನಡ ಜ್ಯೋತಿ ರಥಯಾತ್ರೆಗೆ ಸಾರ್ಥಕತೆ ದೊರೆಯುತ್ತದೆ ಎಂದರು.

# ಐವನ್ ಮೇಲೆ ಸುಮೋಟೋ ಕೇಸ್ ದಾಖಲಿಸಲಿ–ಶ್ರೀಕಾಂತ್ ಶೆಟ್ಟಿ



ಮಂಗಳೂರು: ಉಪನ್ಯಾಸಕ ಅರುಣ್ ಉಳ್ಳಾಲ್ ಅವರು ನೀಡಿರುವ ಒಂದು ವಿಡಿಯೋ ಹೇಳಿಕೆಯನ್ನು ತಿರುಚಿ ಅವರನ್ನು ತೇಜೋವಧೆ ಮಾಡುತ್ತಿರುವ ಸಂಗತಿ ಸಂಘಟ ನೆಯ ಗಮನಕ್ಕೆ ಬಂದಿರುತ್ತದೆ. ಕೆಲವು ಕಿಡಿಗೇ ಡಿಗಳು ಈ ವಿಡಿಯೋವನ್ನು ಮುಂದಿಟ್ಟುಕೊಂಡು ಡಾಕ್ಟರ್ ಅರುಣ್ ಉಳ್ಳಾಲ್ ಮೇಲೆ ಪೊಲೀಸರಿಂದ ಸುಮೊಟೊ ಪ್ರಕರಣ ದಾಖಲಿಸುವ ಕೃತ್ಯದಲ್ಲೂ ಯಶಸ್ವಿಯಾಗಿ ರುತ್ತಾರೆ. ತಾಕತ್ತಿದ್ದರೆ ರಾಜ್ಯಪಾಲರ ಭವನಕ್ಕೆ ಬಾಂಗ್ಲಾ ಮಾದರಿ ನುಗ್ಗುತ್ತೇವೆ ಎಂದ ಐವನ್ ಡಿಸೋಜಾ ಮೇಲೆ ಪೊಲೀಸರು ಸುಮೋಟೋ ಕೇಸ್ ದಾಖಲಿಸಲಿದ್ದಾರೆ ಎಂದು ಶ್ರೀಕಾಂತ್ ಶೆಟ್ಟಿ ಕಾರ್ಕಳ ಕಿಡಿಕಾರಿದರು. ಡಾ. ಅರುಣ್ ಉಳ್ಳಾಲ್ ಕಳೆದ ಹಲವು ವರ್ಷಗಳಿಂದ ಸಾರ್ವಜನಿಕ ಜೀವನದಲ್ಲಿದ್ದು ತಮ್ಮ ಉತ್ತಮ ನಡವಳಿಕೆಯ ಜೊತೆಗೆ ಜನಪದ ಮತ್ತು ಸಂಸ್ಕೃತಿ ಚಿಂತನೆಗಳನ್ನು ಮೈಗೂಡಿಸಿಕೊಂಡು ಸಾವಿರಾರು ಕಾರ್ಯಕ್ರಮಗಳಲ್ಲಿ ತಮ್ಮ ವಿಚಾರವನ್ನು ಪ್ರಸ್ತುತಪಡಿಸುತ್ತಾ ಬಂದಿದ್ದಾರೆ. ಉತ್ತಮ ನಿರೂಪಕರಾಗಿರುವ ಇವರು ಸಾವಿರಾರು ಮಕ್ಕಳಿಗೆ ಧರ್ಮಶಿಕ್ಷಣ ನೀಡುವ ಅಭಿಯಾನವನ್ನು ಯಶಸ್ವಿಯಾಗಿ ನಡೆಸುತ್ತಿದ್ದಾರೆ.

# ಭೋಜನ ಪ್ರಸಾದಕ್ಕೆ ವೈವಿಧ್ಯಮಯ ಪಾಯಸ



ಸುಬ್ರಹ್ಮಣ್ಯ: ನಾಗಾರಾಧನೆಯ ಪುಣ್ಯ ತಾಣ ಸುಬ್ರಹ್ಮಣ್ಯದ ಮಹತೋಭಾರ ಕುಕ್ಕೆ ಶ್ರೀ ಸುಬ್ರಹ್ಮಣ್ಯ ದೇವಸ್ಥಾನದಲ್ಲಿ ಭೋಜನ ಪ್ರಸಾದವು ಪರಮ ಪಾವನವಾದುದು. ಇಲ್ಲಿಗೆ ದಿನಂ ಪ್ರತಿ ಸಹಸ್ರಾರು ಭಕ್ತರು ಆಗಮಿಸಿ ಶ್ರೀ ದೇವರ ದರುಶನ ಪಡೆದು ಕೃತಾರ್ಥರಾಗುತ್ತಾರೆ. ಅನ್ನದಾತ ಸುಬ್ಬಪ್ಪ ಎಂಬ ಪ್ರತೀತಿ ಪಡೆದ ಶ್ರೀ ದೇವಳದಲ್ಲಿ ಇತರ ಸೇವೆಗಳಂತೆ ಬೋಜನ ಪ್ರಸಾದ ಸ್ವೀಕಾರವು ಪವಿತ್ರವಾಗಿದೆ. ಇಲ್ಲಿ ವಾರ್ಷಿಕವಾಗಿ ಸುಮಾರು 55ಲಕ್ಷಕ್ಕೂ ಹೆಚ್ಚಿನ ಭಕ್ತರು ಭೋಜನ ಪ್ರಸಾದ ಸ್ವೀಕರಿಸುತ್ತಾರೆ. ನೂತನ ಯೋಜನೆ ಮೂಲಕ ಪ್ರತಿದಿನ ಬೇರೆ ಬೇರೆ ತೆರನಾದ ಪಾಯಸಗಳನ್ನು ಭಕ್ತರಿಗೆ ಉಣಬಡಿಸುವ ವ್ಯವಸ್ಥೆಯನ್ನು ಅಧಿಕಾರಿಗಳು ಮಾಡಿದ್ದಾರೆ.ಕಡ್ಲೆ ಬೇಳೆ, ಹೆಸರು ಬೇಳೆ, ಕಡ್ಲೆ ಬೇಳೆ ಸಾಬಕ್ಕಿ, ಗೋದಿ ಕಡಿ, ಹಾಲು ಪಾಯಸ, ಅಕ್ಕಿ ಪಾಯಸ, ಶ್ಯಾವಿಗೆ ಪಾಯಸ,ರವೆ ಪಾಯಸ ಮತ್ತು ಸಿರಿಧಾನ್ಯ ಸೇರಿದಂತೆ 10 ಬಗೆಯ ಪಾಯಸವನ್ನು ದಿನವಾಹಿ ತಯಾರಿಸಿ ಭಕ್ತರಿಗೆ ವಿತರಿಸಲಾಗುತ್ತದೆ.

# ನದಿಯಿಂದ ತೆರವಾಗದ ಮಣ್ಣಿನಿಂದ ಸ್ಥಳೀಯರಿಗೆ ಆತಂಕ



ಕಾರವಾರ: ಉತ್ತರಕನ್ನಡ ಜಿಲ್ಲೆಯಲ್ಲಿ ಸುರಿದ ಭಾರಿ ಮಳೆಗೆ ಜು.16ರಂದು ಅಂಕೋಲಾದ ಶಿರೂರು ಬಳಿ ಭಾರಿ ಪ್ರಮಾಣದಲ್ಲಿ ಗುಡ್ಡ ಕುಸಿದು 11 ಮಂದಿ ನಾಪತ್ತೆಯಾಗಿದ್ದರು. 15 ದಿನಗಳ ಕಾಲ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಚಾರ ಕೂಡ ಬಂದಾಗಿತ್ತು. ಈವರೆಗೆ ಮೂರು ಹಂತದ ಕಾರ್ಯಾಚರಣೆ ನಡೆಸಿದರೂ ಕೂಡ ಇನ್ನೂ ಇಬ್ಬರ ಮೃತದೇಹ ಪತ್ತೆಯಾಗಿಲ್ಲ. ಶಿರೂರು ಗುಡ್ಡ ಕುಸಿತ ರಾಜ್ಯದಲ್ಲಿಯೇ ಈ ವರ್ಷ ಕಂಡ ಭೀಕರ ದುರಂತಗಳಲ್ಲಿ ಒಂದು. ಘಟನೆ ಸಂಭವಿಸಿ ಎರಡು ತಿಂಗಳು ಕಳೆದರೂ ಕೂಡ ನಾಪತ್ತೆಯಾದ ಇಬ್ಬರ ಸುಳಿವು ಪತ್ತೆಯಾಗಿಲ್ಲ. ಅಲ್ಲದೆ, ಕುಸಿದ ಗುಡ್ಡದಿಂದ ಬಿದ್ದ ಮಣ್ಣು ಗಂಗಾವಳಿ ನದಿಯಲ್ಲಿ ತುಂಬಿಕೊಂಡಿರುವಾಗಲೇ ಕಾರ್ಯಾಚರಣೆಗೆ ಬಂದ ಡ್ರೆಜ್ಜಿಂಗ್ ಮಷಿನ್ ಗುತ್ತಿಗೆ ಒಪ್ಪಂದ ಮುಗಿದ ಬೆನ್ನಲ್ಲೇ ವಾಪಸು ತೆರಳಿದೆ. ಇದರಿಂದಾಗಿ ಮುಂದೆ ಎದುರಾಗಬಹುದಾದ ಆಪತ್ತುಗಳ ಬಗ್ಗೆ ಸ್ಥಳೀಯರಲ್ಲಿ ಆತಂಕ ಹೆಚ್ಚಾಗಿದೆ. ಒಂದು ವೇಳೆ ಈ ಮಣ್ಣನ್ನು ತೆರವುಗೊಳಿಸದೆ ಇದ್ದಲ್ಲಿ ಎಲ್ಲ ಸಾರ್ವಜನಿಕರೂ ಸೇರಿ ಶಿರೂರು ಹತ್ತಿರ ಗುಡ್ಡ ಕುಸಿತವಾದ ಜಾಗದಲ್ಲಿ ಧರಣಿ ಮಾಡಲಾಗುವುದು ಎಂದು ವಾಸರಕುದರಿಗೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಪ್ರದೀಪ ನಾಯ್ಕ ಎಚ್ಚರಿಸಿದ್ದಾರೆ.

# ಗೋವಾದದಲ್ಲಿ ಕೊಂಕಣಿ ಪರಿಷದ್‌ನ 33ನೇ ಅಧಿವೇಶನ




ಮಂಗಳೂರು: ಅಖಿಲ ಭಾರತ ಕೊಂಕಣಿ ಪರಿಷದ್‌ನ 33ನೇ ಅಧಿವೇಶನ ಗೋವಾದ ಮಡ್ಗಾಂವ್ ರವೀಂದ್ರ ಭವನದಲ್ಲಿ ಅಕ್ಟೋಬರ್ 26 ಮತ್ತು 27 ರಂದು ನಡೆಯಲಿದೆ ಎಂದು ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಪರಿಷದ್‌ನ ಕಾರ್ಯಾಧ್ಯಕ್ಷ ಚೇತನ್ ಅಚಾರ್ಯ ಮಾಹಿತಿ ನೀಡಿ, ಈ ಎರಡು ದಿನಗಳ ಕಾರ್ಯಕ್ರಮವನ್ನು ಅಕ್ಟೋಬರ್ 26ರ ಬೆಳಗ್ಗೆ ಹಿರಿಯ ಬರಹಗಾರ ಮತ್ತು ಭಾಷಾ ವಿದ್ವಾಂಸರಾದ ಡಾ. ಗಣೇಶ ದೇವಿ ಉದ್ಘಾಟಿಸಲಿದ್ದಾರೆ. ಪರಿಷದ್‌ನಲ್ಲಿ ಕೊಂಕಣಿ ಶಿಕ್ಷಣ, ಭಾಷೆಯ ಅಭಿವೃದ್ಧಿಯಲ್ಲಿ ತಂತ್ರಜ್ಞಾನದ ಬಳಕೆ ಇತ್ಯಾದಿಗಳನ್ನು ಒಳಗೊಂಡ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಯಲಿದೆ.ಪರಿಷದಿಗೆ ಕರ್ನಾಟಕ, ಕೇರಳ, ಮಹಾರಾಷ್ಟ್ರ ಮತ್ತು ಗೋವಾದಿಂದ ಪ್ರತಿನಿಧಿಗಳು ಹಾಜರಾಗಲಿದ್ದಾರೆ. ರೆ? ಮೌಝಿನೋ ಅತಾಡೆ ಅವರು ಪರಿಷದಿನ ಅಧ್ಯಕ್ಷರಾಗಿ ನಾಮನಿರ್ದೇಶನಗೊಂಡಿದ್ದು, ಎರಡು ವರ್ಷಗಳ ಕಾಲ ಈ ಹುದ್ದೆಯನ್ನು ಹೊಂದಿರುತ್ತಾರೆ.

# ಧರ್ಮಸ್ಥಳದಲ್ಲಿ ಕಾಡಾನೆಗಳ ಹಾವಳಿ



ಬೆಳ್ತಂಗಡಿ: ಧರ್ಮಸ್ಥಳ ಗ್ರಾಮದಲ್ಲಿ ಕಾಡಾನೆಗಳ ಹಾವಳಿ ನಿರಂತರವಾಗಿ ಮುಂದುವರಿದಿದ್ದು, ಧರ್ಮಸ್ಥಳ ಪೊಲಸೊಳಿಕೆ ನಿವಾಸಿ ಕೃಷ್ಣಪ್ಪ ಅವರ ಮನೆಯ ಸಮೀಪದ ತೋಟಕ್ಕೆ ನುಗ್ಗಿದ ಕಾಡಾನೆಗಳು ಬಾಳೆ ಹಾಗೂ ಅಡಿಕೆ ಗಿಡಗಳನ್ನು, ಮರಗೆಣಸಿನ ಗಿಡಗಳನ್ನು ನಾಶಗೊಳಿಸಿದೆ. ತೋಟದಲ್ಲಿದ್ದ ಬಾಳೆಗಿಡಗಳನ್ನು ಸಂಪೂರ್ಣವಾಗಿ ಮುರಿದು ಹಾಕಿದ್ದು ಮನೆಯ ಸಮೀಪವೇ ಆನೆಗಳು ಓಡಾಟ ನಡೆಸಿದ್ದು ಜನರಲ್ಲಿ ಭಯಮೂಡಿಸಿದೆ. ಧರ್ಮಸ್ಥಳ ಕೆಎಸ್ಸಾರ್ಟಿಸಿ ಬಸ್ ನಿಲ್ದಾಣದ ಸಮೀಪದ ನಿವಾಸಿ ಕ್ಸೇವಿಯರ್ ಎಂಬವರಿಗೆ ಸೇರಿದ ತೋಟಕ್ಕೆ ನುಗ್ಗಿದ ಕಾಡಾನೆಗಳು ಕೃಷಿಗೆ ಹಾನಿಯುಂಟುಮಾಡಿದೆ. ಇಲ್ಲಿ ಫಸಲು ಬರುವ ಸುಮಾರು ಹತ್ತಕ್ಕೂ ಅಧಿಕ ಅಡಿಕೆ ಮರಗಳನ್ನು ನೆಲಕ್ಕೆ ಉರುಳಿಸಿದೆ. ದೊಡ್ಡ ತೆಂಗಿನ ಮರಗಳನ್ನೂ ನೆಲಕ್ಕೆ ಉರುಳಿಸಿದೆ. ತೋಟದಲ್ಲಿ ನೀರಿನ ಸಂಪರ್ಕಕ್ಕೆ ಹಾಕಲಾಗಿದ್ದ ಪೈಪ್‌ಗಳನ್ನು ಸಂಪೂರ್ಣವಾಗಿ ನಾಶಪಡಿಸಿದ್ದು ಭಾರೀ ನಷ್ಟ ಸಂಭವಿಸಿದೆ. ಇಲ್ಲಿನ ನೇರ್ತನೆ ರಸ್ತೆಯ ಪಕ್ಕದಲ್ಲಿಯೇ ಕಾಡಾನೆಗಳು ಓಡಾಟ ನಡೆಸುತ್ತಿದ್ದು ಸಂಜೆಯಾದರೆ ಜನರು ಮನೆಗಳಿಂದ ಹೊರಬರಲು ಭಯ ಪಡುವ ವಾತಾವರಣ ನಿರ್ಮಾಣವಾಗಿದೆ.

# ವಿಶೇಷ ಶೈಕ್ಷಣಿಕ ವಿದ್ಯಾರ್ಥಿ ವೇತನ : ಡಾ.ಮೋಹನ್ ಆಳ್ವ



ಮೂಡುಬಿದಿರೆ: ಕಳೆದ ನಾಲ್ಕು ದಶಕಗಳಿಂದ ಶೈಕ್ಷಣಿಕ, ಕ್ರೀಡೆ ಹಾಗೂ ಸಾಂಸ್ಕೃತಿಕ ದತ್ತು ಸ್ವೀಕಾರ, ಸಹಾಯಧನ, ಪ್ರೋತ್ಸಾಹ ಧನ, ವಿವಿಧ ಶಿಷ್ಯವೇತನ, ಬಹುಮಾನ, ಪುರಸ್ಕಾರಗಳ ಮೂಲಕ ನಾಡಿನ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುತ್ತಾ ಬರುತ್ತಿರುವ ಆಳ್ವಾಸ್ ಶಿಕ್ಷಣ ಪ್ರತಿಷ್ಠಾನ ಈ ಬಾರಿ ಪದವಿ ಪೂರ್ವ ವಿದ್ಯಾರ್ಥಿಗಳಿಗಾಗಿಯೇ ವಿಶೇಷ ಶೈಕ್ಷಣಿಕ ವಿದ್ಯಾರ್ಥಿ ವೇತನವನ್ನು ಘೋಷಿಸಿದೆ. ಈ ಕುರಿತು ಮಾಹಿತಿ ನೀಡಿದ ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದ ಅಧ್ಯಕ್ಷ ಡಾ.ಎಂ. ಮೋಹನ ಆಳ್ವ ಅವರು, 10ನೇ ತರಗತಿ (ಎಸ್ಸೆಸ್ಸೆಲ್ಸಿ)ಯಲ್ಲಿ ಸಿಬಿಎಸ್‌ಇ (ಕೇಂದ್ರೀಯ ಪ್ರೌಢಶಿಕ್ಷಣ ಮಂಡಳಿ), ಐಸಿಎಸ್‌ಇ (ಭಾರತೀಯ ಪ್ರೌಢ ಶಿಕ್ಷಣದ ಪ್ರಮಾಣ ಪತ್ರ) ಹಾಗೂ ರಾಜ್ಯ ಪಠ್ಯಕ್ರಮ (ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ) ದಲ್ಲಿ ಪರೀಕ್ಷೆ ಬರೆಯುತ್ತಿರುವ ವಿದ್ಯಾರ್ಥಿಗಳು ಈ ಶೈಕ್ಷಣಿಕ ವಿದ್ಯಾರ್ಥಿ ವೇತನ ಪರೀಕ್ಷೆ ಬರೆ ಯಲು ಅರ್ಹರಾಗಿರುತ್ತಾರೆ. ವಿದ್ಯಾರ್ಥಿಗಳ ಪ್ರವೇಶ ಪರೀಕ್ಷೆಯ ಅಂಕಗಳನ್ನು ಪರಿಗಣಿಸಿ ವಿದ್ಯಾರ್ಥಿ ವೇತನಕ್ಕೆ ಆಯ್ಕೆ ಮಾಡಲಾಗುವುದು ಎಂದು ತಿಳಿಸಿದರು.

# ಸುದ್ದಿ ತುಣುಕು

ಆಂಬುಲೆನ್ಸ್‌ಗಳಿಗೆ ದಾರಿ ಬಿಟ್ಟಿದ್ದಕ್ಕೆ ಬೇರೆ ವಾಹನಗಳ ಚಾಲಕರಿಗೆ ದಂಡ ಬಿದ್ದರೆ ಅದನ್ನು ಮನ್ನಾ ಮಾಡಲಾಗುವುದು ಎಂದು ಸಂಚಾರ ವಿಭಾಗದ ಜಂಟಿ ಪೊಲೀಸ್ ಕಮಿಷನರ್ ಎಂ.ಎನ್.ಅನುಚೇತ್ ಹೇಳಿದ್ದಾರೆ

ಧಾರವಾಡ ಗ್ರಾಮೀಣ ಕ್ಷೇತ್ರದ ಶಾಸಕ ವಿನಯ್ ಕುಲಕರ್ಣಿ ಅವರ ವಿರುದ್ಧ ಅತ್ಯಾಚಾರ ಪ್ರಕರಣ ದಾಖಲಿಸಿದ್ದ ಸಂತ್ರಸ್ತೆಯನ್ನು ವಿವಿಧೆಡೆಗೆ ಕರೆದೊಯ್ದು ಪೊಲೀಸರು ಸ್ಥಳ ಮಹಜರು ನಡೆಸಿದರು.

ಇನ್‌ಸ್ಟಾಗ್ರಾಂ ಸಾಮಾಜಿಕ ಜಾಲತಾಣದಲ್ಲಿ ಪರಿಚಯವಾಗಿದ್ದ ಯುವತಿಗೆ ಮದುವೆ ಆಗುವುದಾಗಿ ನಂಬಿಸಿ ಆಕೆಯ ಜತೆಗೆ ಖಾಸಗಿ ಕ್ಷಣಗಳನ್ನು ಕಳೆದು ವಂಚಿಸಿದ್ದ ಕೇರಳದ ಖಾಸಗಿ ಕಂಪನಿಗೆ ಸೇರಿದ ಹಡಗಿನ ಸಿಬ್ಬಂದಿಯೊಬ್ಬರನ್ನು ಗೋವಿಂದಪುರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ದೆಹಲಿ, ರಾಜಸ್ಥಾನ ಹಾಗೂ ದೇಶದ ಹಲವೆಡೆ ಹೆಸರು ಬದಲಿಸಿಕೊಂಡು ನೆಲೆಸಿದ್ದ ಪಾಕಿಸ್ಥಾನದ ಆರು ಮಹಿಳೆಯರು ಸೇರಿ ಹತ್ತು ಜನರನ್ನು ಜಿಗಣಿ ಪೊಲೀಸರು ಬಂಧಿಸಿದ್ದಾರೆ.

ನಾಡಹಬ್ಬ ದಸರಾ ಸಂಭ್ರಮವನ್ನು ನೋಡಲು ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಮೈಸೂರಿಗೆ ಭೇಟಿ ನೀಡುತ್ತಿದ್ದು, ದಟ್ಟಣೆ ತಪ್ಪಿಸಲು ನೈರುತ್ಯ ರೈಲ್ವೆ ಮೈಸೂರು ವಿಭಾಗವು ವಿಶೇಷ ರೈಲು ಸೇವೆ ಆರಂಭಿಸಿದೆ.

ಜಮ್ಮು ಮತ್ತು ಕಾಶ್ಮೀರಕ್ಕೆ ರಾಜ್ಯದ ಸ್ಥಾನಮಾನ ನೀಡುವಂತೆ ಆಗ್ರಹಿಸುವ ನಿರ್ಣಯವನ್ನು ನೂತನ ಸಚಿವ ಸಂಪುಟ ಮೊದಲ ನಿರ್ಣಯವಾಗಿ ಅಂಗೀಕರಿಸಲಿದೆ ಎಂದು ನ್ಯಾಷನಲ್ ಕಾನ್ಫರೆನ್ಸ್ ಉಪಾಧ್ಯಕ್ಷ ಉಮರ್ ಅಬ್ದುಲ್ಲಾ ಪ್ರಕಟಿಸಿದ್ದಾರೆ.

ದಿಲ್ಲಿಯ ಲಡಾಖ್ ಭವನದಲ್ಲಿ ತಾನು ನಡೆಸುತ್ತಿರುವ ಉಪವಾಸ ಸತ್ಯಾಗ್ರಹವನ್ನು ಬೆಂಬಲಿಸಲು ಬಯಸುವವರು ಅಕ್ಟೋಬರ್ 13 ರಂದು ಒಂದು ದಿನದ ಉಪವಾಸ ಮಾಡುವ ಮೂಲಕ ಪಾಲ್ಗೊಳ್ಳಬಹುದು ಎಂದು ಹವಾಮಾನ ಕಾರ್ಯಕರ್ತ ಸೋನಮ್ ವಾಂಗ್ಚುಕ್ ಹೇಳಿದ್ದಾರೆ.

ಗೇರುಕಟ್ಟೆ ಎ.ಟಿ.ಎಂ ಕೇಂದ್ರದಲ್ಲಿ ಹಣ ತೆಗೆಯುತ್ತಿದ್ದ ವೃದ್ಧನ ಕೈಯಿಂದ ಎ.ಟಿ.ಎಂ ಕಾರ್ಡ್ ಕಸಿದುಕೊಂಡ ಅಪರಿಚಿತರು, ಅದರಲ್ಲಿದ್ದ ಹಣ ಡ್ರಾ ಮಾಡಿಕೊಂಡ ಘಟನೆ ಸಂಭವಿಸಿದ್ದು, ಈ ಬಗ್ಗೆ ಬೆಳ್ತಂಗಡಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಹಾಸನ, ಚಿಕ್ಕಮಗಳೂರು, ಶಿವಮೊಗ್ಗ ಭಾಗದ ಕಾಡಾನೆ ಹಾವಳಿ ನಿಯಂತ್ರಿಸಲು ಭದ್ರಾ ಅಭಯಾರಣ್ಯದಲ್ಲಿ ಒಂದು ಆನೆ ಶಿಬಿರ ಸ್ಥಾಪಿಸುವುದಾಗಿ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರಸಚಿವ ಈಶ್ವರ ಖಂಡ್ರೆ ಘೋಷಿಸಿದ್ದಾರೆ.

ಭಾರತದ ಪ್ರವಾಸದಲ್ಲಿರುವ ಮಾಲ್ಡೀವ್ಸ್ ಅಧ್ಯಕ್ಷ ಡಾ. ಮೊಹಮ್ಮದ್ ಮುಯಿಜ್ಜು ಮತ್ತು ಪ್ರಥಮ ಮಹಿಳೆ ಸಾಜಿದಾ ಮೊಹಮ್ಮದ್ ಅವರು ಬೆಂಗಳೂರಿಗೆ ಆಗಮಿಸಿದ್ದು, ಕರ್ನಾಟಕದ ರಾಜಭವನಕ್ಕೆ ಸೌಹಾರ್ದಯುತ ಭೇಟಿ ನೀಡಿದರು.

ಸತೀಶ್ ಜಾರಕಿಹೊಳಿ ಮತ್ತು ಮಹದೇವಪ್ಪ ಸೇರಿದಂತೆ ನಾವು ಯಾವತ್ತೂ ಮುಖ್ಯಮಂತ್ರಿ ಪದವಿ ಬಗ್ಗೆ ಚರ್ಚೆ ಮಾಡಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ.

ತನ್ನ ಮನೆಯಲ್ಲಿ ತಾನೇ ಕಳ್ಳತನ ಮಾಡಿ, ಸುಳ್ಳು ಕಥೆ ಕಟ್ಟಿದ್ದ ಯುವತಿ ಹಾಗೂ ಆಕೆಗೆ ಸಹಾಯ ಮಾಡಿದ ವ್ಯಕ್ತಿ ಇದೀಗ ಪೊಲೀಸರ ಅತಿಥಿಯಾಗಿರುವ ಘಟನೆ ಚನ್ನಗಿರಿಯಲ್ಲಿ ನಡೆದಿದೆ.

ಕಳೆದ 10 ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಆಡಳಿತದಲ್ಲಿ ಒಂದೇ ಒಂದು ಭ್ರಷ್ಟಾಚಾರದ ಆರೋಪವಿಲ್ಲ. ಕೇಂದ್ರ ಸರ್ಕಾರ ಕೈಗೊಂಡ ನೀತಿಗಳಿಂದ ದೇಶವು ವಿಶ್ವದ 5 ದೊಡ್ಡ ಆರ್ಥಿಕ ರಾಷ್ಟ್ರಗಳಲ್ಲಿ ಒಂದಾಗಿ ಬೆಳೆದಿದೆ ಎಂದು ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

# ಕರಿಬೇವು ಚಟ್ನಿಪುಡಿ



**ಮಾಡುವ ವಿಧಾನ :**

ಕರಿಬೇವು – 3 ಕಪ್
ಕಡಲೇ ಬೇಳೆ – 1ಕಪ್
ಉದ್ದಿನ ಬೇಳೆ – 1/4 ಕಪ್
ಹುಣಿಸೆ ಹಣ್ಣು – ಚಿಕ್ಕ ನಿಂಬೆ ಹಣ್ಣಿನ ಗಾತ್ರ
ಗಟ್ಟಿ ಇಂಗು – ಸ್ವಲ್ಪ
ಬ್ಯಾಡಗಿ ಮೆಣಸಿನಕಾಯಿ – 15 ರಿಂದ 20
ಗುಂಟೂರು ಮೆಣಸಿನಕಾಯಿ – 6 ರಿಂದ 8
ಉಪ್ಪು – ರುಚಿಗೆ ತಕ್ಕಷ್ಟು
ಒಣ ಕೊಬ್ಬರಿ – 1 ಕಪ್

**ಮಾಡುವ ವಿದಾನ :**

ಮೊದಲಿಗೆ ಒಂದು ಬಾಣಲೆಯಲ್ಲಿ ಕರಿ ಬೇವಿನ ಎಲೆಯನ್ನು ಚೆನ್ನಾಗಿ ಹುರಿದು ತೆಗೆದಿಟ್ಟುಕೊಳ್ಳಬೇಕು. ನಂತರ ಕಡಲೆ ಬೇಳೆ, ಉದ್ದಿನ ಬೇಳೆಯನ್ನು ಬೇರೆ ಬೇರೆಯಾಗಿ ಹುರಿದಿಟ್ಟುಕೊಳ್ಳಬೇಕು. ನಂತರ ಒಣ ಕೊಬ್ಬರಿಯನ್ನು ಚೆನ್ನಾಗಿ ಹುರಿಯಬೇಕು. ನಂತರ ಅದೇ ಬಾಣಲೆಗೆ ಸ್ವಲ್ಪ ಎಣ್ಣೆ ಹಾಕಿ ಮೆಣಸಿನಕಾಯಿಯನ್ನು ಚೆನ್ನಾಗಿ ಹುರಿದುಕೊಳ್ಳಬೇಕು. ಕೊನೆಯಲ್ಲಿ ಇಂಗು ಮತ್ತು ಹುಣಸೆಹಣ್ಣನ್ನು ಸ್ವಲ್ಪ ಬಿಸಿ ಮಾಡಿಕೊಳ್ಳಬೇಕು. ಈಗ ಹುರಿದ ಎಲ್ಲಾ ಸಾಮಗ್ರಿಗಳು ತಣ್ಣಗಾದ ನಂತರ ರುಚಿಗೆ ತಕ್ಕಷ್ಟು ಉಪ್ಪು ಹಾಕಿ ಪುಡಿ ಮಾಡಿದರೆ ರುಚಿಕರವಾದ ಮತ್ತು ಆರೋಗ್ಯಕರವಾದ ಕರಿಬೇವಿನ ಚಟ್ನಿ ಪುಡಿ ಸವಿಯಲು ಸಿದ್ಧ.

# ಗುರಿ ಸಾಧಿಸುವವರೆಗೂ ಯುದ್ಧ ನಿಲ್ಲಿಸುವ ಮಾತೇ ಇಲ್ಲ:ಇಸ್ರೇಲ್



ಜೆರುಸಲೇಂ: ಗಾಜಾದಲ್ಲಿ ಹಮಾಸ್ ಬಳಿ ಬಂಧಿಯಾಗಿರುವ ಎಲ್ಲ ಒತ್ತೆಯಾಳುಗಳನ್ನು ಬಿಡಿಸಿಕೊಳ್ಳಲು ಮತ್ತು ಉದ್ದೇಶಿತ ಗುರಿಗಳನ್ನು ಸಾಧಿಸಲು ತಮ್ಮ ಸರ್ಕಾರ ಬದ್ಧವಾಗಿದೆ ಎಂದು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೇಳಿದ್ದಾರೆ. ಇಸ್ರೇಲಿ ರಕ್ಷಣಾ ಪಡೆಗಳ (ಐಡಿಎಫ್) ಪುರುಷ ಮತ್ತು ಮಹಿಳಾ ಹೋರಾಟಗಾರರು, ನಿಯಮಿತ ಮತ್ತು ಮೀಸಲು ಯೋಧರು, ಸೇನೆ ಮತ್ತು ಪೊಲೀಸ್, ಶಿನ್ ಬೆಟ್ ಮತ್ತು ಮೊಸ್ಸಾದ್‌ನಲ್ಲಿನ ಪುರುಷ ಮತ್ತು ಮಹಿಳಾ ಹೋರಾಟಗಾರರ ಶೌರ್ಯಕ್ಕೆ ಪ್ರಧಾನಿ ನೆತನ್ಯಾಹು ಕೃತಜ್ಞತೆ ವ್ಯಕ್ತಪಡಿಸಿದರು.

# 2024ರ ರಸಾಯನ ಶಾಸ್ತ್ರ ನೊಬೆಲ್ ಪ್ರಶಸ್ತಿ ಪ್ರಕಟ



ಸ್ಟಾಕ್ ಹೋಮ್: ಗೂಗಲ್ ಡೀಪ್ ಮೈಂಡ್ ಕಂಪನಿಯ ಇಬ್ಬರು ವಿಜ್ಞಾನಿಗಳಾದ ಡೆಮಿಸ್ ಹಸ್ಸಾಬಿಸ್ ಮತ್ತು ಜಾನ್ ಎಂ.ಜಂಪರ್ ಸೇರಿದಂತೆ ವಾಷಿಂಗ್ಟನ್ ವಿಶ್ವವಿದ್ಯಾಲಯದ ಪ್ರೊಫೆಸರ್ ಡೇವಿಡ್ ಬೇಕರ್ ಅವರು 2024ರ ರಸಾಯನಶಾಸ್ತ್ರದ ನೊಬೆಲ್ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಅಮೆರಿಕದ ವಿಜ್ಞಾನಿಗಳಾದ ವಿಕ್ಟರ್ ಆಂಬ್ರೋಸ್ ಮತ್ತು ಗ್ಯಾರಿ ರುವ್ಕುನ್ ಅವರಿಗೆ 2024ರ ವೈದ್ಯಕೀಯ ನೊಬೆಲ್ ಪ್ರಶಸ್ತಿಯನ್ನು ನೀಡಲಾಗಿದೆ.

# ಪಾಕಿಸ್ಥಾನದಲ್ಲಿ ಹೊಸ ಪೋಲಿಯೊ ಪ್ರಕರಣ ಪತ್ತೆ




ಇಸ್ಲಾಮಾಬಾದ್: ಪಾಕಿಸ್ತಾನದಲ್ಲಿ ಕನಿಷ್ಠ ನಾಲ್ಕು ಹೊಸ ಪೋಲಿಯೊ ಪ್ರಕರಣಗಳು ವರದಿಯಾಗಿದ್ದು, ಈ ವರ್ಷ ಕಾಣಿಸಿಕೊಂಡ ಪೋಲಿಯೊ ಪ್ರಕರಣಗಳ ಒಟ್ಟು ಸಂಖ್ಯೆ 32ಕ್ಕೆ ತಲುಪಿದೆ ಎಂದು ಅಧಿಕೃತ ಹೇಳಿಕೆ ತಿಳಿಸಿದೆ. ನಾಲ್ಕು ಹೊಸ ಪ್ರಕರಣಗಳ ಪೈಕಿ ಮೂರು ಸಿಂಧ್ ಪ್ರಾಂತ್ಯದಲ್ಲಿ ಮತ್ತು ಒಂದು ಖೈಬರ್ ಪಖ್ತುನಖ್ವಾ ಪ್ರಾಂತ್ಯದಲ್ಲಿ ಕಂಡು ಬಂದಿವೆ. ಬಲೂಚಿಸ್ತಾನದಲ್ಲಿ 16, ಸಿಂಧ್‌ನಲ್ಲಿ 10, ಖೈಬರ್ ಪಖ್ತುನಖ್ವಾದಲ್ಲಿ 4 ಮತ್ತು ಪಂಜಾಬ್ ಹಾಗೂ ಇಸ್ಲಾಮಾಬಾದ್‌ಗಳಲ್ಲಿ ತಲಾ ಒಂದು ಪ್ರಕರಣಗಳು ವರದಿಯಾಗಿವೆ.

# ಬಾಂಗ್ಲಾದೇಶದಲ್ಲಿ ದುರ್ಗೆಯ ಪ್ರತಿಷ್ಠಾಪನೆ, ಮೆರವಣಿಗೆ ಬಂದ್



ಬಾಂಗ್ಲಾದೇಶ: ಬಾಂಗ್ಲಾದೇಶದಲ್ಲಿ ಮಾಜಿ ಪ್ರಧಾನಿ ಶೇಕ್ ಹಸೀನಾ ಅವರ ಸರ್ಕಾರ ಪತನವಾದ ಬಳಿಕ ಹಿಂದುಗಳ ಮೇಲಿನ ದಾಳಿ ಅವ್ಯಾಹತವಾಗಿ ಮುಂದುವರಿದಿದೆ. ನವರಾತ್ರಿ ಹಿನ್ನೆಲೆಯಲ್ಲಿ ನಡೆಯಬೇಕಿದ್ದ ದುರ್ಗೆಯ ಆಚರಣೆಯ ಮೇಲೂ ದಾಳಿಕೋರರ ಕರಿನೆರಳು ಬಿದ್ದಿದ್ದು, ಈ ಬಾರಿ ಕೇವಲ ಪೂಜೆ ಮಾತ್ರ ನಡೆಸಲು ಅಲ್ಲಿನ ಅಲ್ಪಸಂಖ್ಯಾತ ಹಿಂದು ಸಮುದಾಯ ತೀರ್ಮಾನಿಸಿದೆ. ಹಿಂದು ಸಮುದಾಯ ಈ ವರ್ಷ ದುರ್ಗಾ ಪೂಜೆಯನ್ನು ಸರಳವಾಗಿ ನಡೆಸಲು ನಿರ್ಧರಿಸಿದೆ.

# ಕೀನ್ಯಾದಲ್ಲಿ 10 ಲಕ್ಷ ಜನರಿಗೆ ಆಹಾರ ಕೊರತೆ



ನೈರೋಬಿ: ಕೀನ್ಯಾದಲ್ಲಿ ಕನಿಷ್ಠ ಒಂದು ದಶಲಕ್ಷ ಜನರು ಆಹಾರದ ಕೊರತೆಯಿಂದ ಬಳಲುತ್ತಿದ್ದಾರೆ ಮತ್ತು ಅವರಿಗೆ ತಕ್ಷಣದಲ್ಲಿ ಮಾನವೀಯ ಸಹಾಯ ನೀಡುವುದು ಅಗತ್ಯವಾಗಿದೆ ಎಂದು ದೇಶದ ರಾಷ್ಟ್ರೀಯ ಬರ ನಿರ್ವಹಣಾ ಪ್ರಾಧಿಕಾರ (ಎನ್‌ಡಿಎಂಎ) ತಿಳಿಸಿದೆ. ಕೀನ್ಯಾದ ರಾಜಧಾನಿ ನೈರೋಬಿಯಲ್ಲಿ ಬಿಡುಗಡೆ ಮಾಡಿದ ವರದಿಯಲ್ಲಿ ದೇಶದ 47 ಕೌಂಟಿಗಳ ಪೈಕಿ 23 ಕೌಂಟಿಗಳಲ್ಲಿನ ಜನ ಹಸಿವಿನಿಂದ ಬಳಲುತ್ತಿದ್ದಾರೆ ಎಂದು ತಿಳಿಸಲಾಗಿದ್ದು, ಈ ಪ್ರದೇಶಗಳನ್ನು ಬರಪೀಡಿತ ಎಂದು ಗುರುತಿಸಲಾಗಿದೆ.

# ಪ್ರಜಾಪ್ರಭುತ್ವ ಕಾಪಾಡಬಲ್ಲ ಅಭ್ಯರ್ಥಿ ಟ್ರಂಪ್': ಎಲೋನ್ ಮಸ್ಕ್



ವಾಶಿಂಗ್ಟನ್: ಬಿಲಿಯನೇರ್ ಟೆಕ್ ಉದ್ಯಮಿ ಎಲೋನ್ ಮಸ್ಕ್ ಶನಿವಾರ ಡೊನಾಲ್ಡ್ ಟ್ರಂಪ್ ಅವರೊಂದಿಗೆ ಕಾಣಿಸಿಕೊಂಡಿದ್ದು, ಮುಂಬರುವ ಅಧ್ಯಕ್ಷೀಯ ಚುನಾವಣೆಯ ಬಗ್ಗೆ ಮಾತನಾಡಿದ್ದಾರೆ. ಮುಂಬರುವ ಅಧ್ಯಕ್ಷೀಯ ಚುನಾವಣೆಯಲ್ಲಿ ರಿಪಬ್ಲಿಕನ್ ಪಕ್ಷದ ಅಭ್ಯರ್ಥಿಯಾಗಿರುವ ಡೊನಾಲ್ಡ್ ಟ್ರಂಪ್ ಅಮೆರಿಕದಲ್ಲಿ ಪ್ರಜಾಪ್ರಭುತ್ವವನ್ನು ಕಾಪಾಡಬಲ್ಲ ಏಕೈಕ ಅಭ್ಯರ್ಥಿಯಾಗಿದ್ದಾರೆ ಎಂದು ಅವರು ತೀಕ್ಷ್ಣವಾಗಿ ಪ್ರತಿಪಾದಿಸಿದ್ದಾರೆ.

# 2–0 ಅಂತರದಿಂದ ಸರಣಿ ಗೆದ್ದ ಭಾರತ : ಬಾಂಗ್ಲಾ ತತ್ತರ




ನವದೆಹಲಿ: ಯುವ ಕ್ರಿಕೆಟಿಗ ನಿತಿಶ್ ರೆಡ್ಡಿ ಆಲ್‌ರೌಂಡರ್ ಆಟ, ರಿಂಕು ಸಿಂಗ್‌ರ ಭರ್ಜರಿ ಬ್ಯಾಟಿಂಗ್ ಎದುರು ಬಾಂಗ್ಲಾದೇಶ ನಿರುತ್ತರವಾಯಿತು. ಇದರಿಂದ 2ನೇ ಟಿ20 ಪಂದ್ಯದಲ್ಲೂ 86 ರನ್‌ಗಳಿಂದ ಸೋಲು ಕಂಡಿತು. ಈ ಮೂಲಕ ಭಾರತ ಮೂರು ಪಂದ್ಯಗಳ ಸರಣಿಯನ್ನು ಒಂದು ಪಂದ್ಯ ಬಾಕಿ ಇರುವಂತೆಯೇ 2–0 ಅಂತರದಲ್ಲಿ ಜಯಿಸಿತು. ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆದ ಎರಡನೇ ಟಿ20 ಪಂದ್ಯದಲ್ಲಿ ಭಾರತ ಸಂಪೂರ್ಣ ಪ್ರಾಬಲ್ಯ ಸಾಧಿಸಿತು.

# ಸನತ್ ಜಯಸೂರ್ಯ ಶ್ರೀಲಂಕಾ ತಂಡದ ಮುಖ್ಯಕೋಚ್



ನವದೆಹಲಿ: ಶ್ರೀಲಂಕಾ ಪುರುಷರ ತಂಡದ ನೂತನ ಮುಖ್ಯ ಕೋಚ್ ಅನ್ನು ಘೋಷಿಸಲಾಗಿದೆ. ತಂಡದ ಮಾಜಿ ಅನುಭವಿ ಆರಂಭಿಕ ಬ್ಯಾಟ್ಸ್‌ಮನ್ ಸನತ್ ಜಯಸೂರ್ಯ ಅವರನ್ನು ನೂತನ ಕೋಚ್ ಆಗಿ ನೇಮಿಸಲಾಗಿದೆ. ಇದಕ್ಕೂ ಮೊದಲು ಸನತ್ ಜಯಸೂರ್ಯ ಕೆಲಕಾಲ ತಂಡದಲ್ಲಿ ಹಂಗಾಮಿ ಕೋಚ್ ಆಗಿ ಕಾರ್ಯನಿರ್ವಹಿತ್ತಿದ್ದರು. ಈ ವೇಳೆ ಅವರ ಮಾರ್ಗದರ್ಶನದಲ್ಲಿ ತಂಡ ಅತ್ಯುತ್ತಮ ಪ್ರದರ್ಶನ ನೀಡಿದೆ. ಈ ಕಾರಣಕ್ಕಾಗಿ, ಅವರನ್ನು ಮಾರ್ಚ್ 2026ರವರೆಗೆ ಕಾಯಂ ಕೋಚ್ ಆಗಿ ನೇಮಿಸಲಾಗಿದೆ.

# ಪಾಕಿಸ್ಥಾನ ವಿರುದ್ಧ ಭಾರತ ವನಿತೆಯರಿಗೆ ಗೆಲುವು




ದುಬೈ: ಮೊದಲ ಪಂದ್ಯದಲ್ಲಿ ಸೋಲು ಕಂಡು ಟಿ–20 ವಿಶ್ವಕಪ್‌ನ ಗುಂಪು ಹಂತದಿಂದಲೇ ಹೊರಬೀಳುವ ಭೀತಿಯಲ್ಲಿದ್ದ ಭಾರತ ನಡೆದ ಪಾಕಿಸ್ಥಾನ ಮಹಿಳೆಯರ ವಿರುದ್ಧದ ಪಂದ್ಯದಲ್ಲಿ ಗೆದ್ದು ಟೂರ್ನಿಯಲ್ಲಿ ಮುಂದುವರೆದಿದೆ. ಮೊದಲ ಜಯದ ಮೂಲಕ ಸೆಮೀಸ್ ಆಸೆಯನ್ನು ಜೀವಂತವಾಗಿರಿಸಿಕೊಂಡಿದೆ. ಗೆಲ್ಲುವ ಛಲದೊಂದಿಗೆ ಗುರಿ ಬೆನ್ನತ್ತಿದ ಭಾರತದ ಮಹಿಳೆಯರು ಶೆಫಾಲಿ ವರ್ಮಾ, ಜೆಮಿಮಾ ರೊಡ್ರಿಗ್ಸ್, ನಾಯಕಿ ಹರ್ಮನ್ ಪ್ರೀತ್ ಕೌರ್ ಅವರ ಉತ್ತಮ ಬ್ಯಾಟಿಂಗ್ ನೆರವಿನಿಂದ 18.5 ಓವರ್‌ಗೆ 4 ವಿಕೆಟ್ ಕಳೆದುಕೊಂಡು ಜಯ ಸಾಧಿಸಿತು.

# ಮುಡಾ ಹಗರಣ ಮುಚ್ಚಿ ಹಾಕಲು ಜಾತಿ ಗಣತಿ ನಾಟಕ–ಎಚ್ಡಿಕೆ




ಬೆಂಗಳೂರು :ಮುಡಾ ಹಗರಣದಿಂದ ಜನರ ಗಮನವನ್ನು ಬೇರೆಡೆಗೆ ಸೆಳೆಯಲು ಜಾತಿ ಗಣತಿ ವಿಷಯವನ್ನು ಮುನ್ನಲೆಗೆ ತಂದು ನಾಟಕ ಆಡಲಾಗುತ್ತಿದೆ ಎಂದು ಕೇಂದ್ರದ ಭಾರೀ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಕಿಡಿಕಾರಿದ್ದಾರೆ. ಜೆಪಿ ನಗರದ ತಮ್ಮ ನಿವಾಸದ ಬಳಿ ಇಂದು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸರ್ಕಾರದ ವಿರುದ್ಧ ಗುರುತರ ಆರೋಪಗಳು ಕೇಳಿ ಬಂದಾಗಲೆಲ್ಲ ಜನರ ಗಮನ ಬೇರೆಡೆಗೆ ಹೊರಳಿಸಲು ತಂತ್ರಗಾರಿಕೆ ಮಾಡುತ್ತಿದ್ದಾರೆ. ಈಗ ಮುಡಾ ಹಗರಣದ ಮೂಲಕ ಜನರ ದಿಕ್ಕು ತಪ್ಪಿಸಲು ಜಾತಿಗಣತಿಯ ವಿಚಾರಮುಂದಕ್ಕೆ ತಂದಿದ್ದಾರೆ ಎಂದು ಆರೋಪಿಸಿದರು.

# ಬಗರ್ ಹುಕುಂ ಅರ್ಜಿಗಳ ವಿಲೇವಾರಿ: ಕಾನೂನು ಕ್ರಮ



ಬೆಂಗಳೂರು : ಅರ್ಹ ಭೂಹೀನರಿಗೆ ಜಮೀನು ಮಂಜೂರು ಮಾಡಬೇಕು ಎಂಬುದು ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ. ಇದೇ ಕಾರಣಕ್ಕೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುತ್ತಿದ್ದಂತೆ ಅಕ್ರಮ ಸಕ್ರಮ ಯೋಜನೆಯಡಿ "ಬಗರ್ ಹುಕುಂ" ಅರ್ಜಿ ಆಹ್ವಾನಿಸಲಾಯಿತು. ಅಲ್ಲದೆ, ಕಳೆದ ಒಂದು ವರ್ಷದಿಂದ ಸ್ವತಃ ನಾನು ಎಲ್ಲಾ ಜಿಲ್ಲೆಗಳಿಗೂ ಪ್ರವಾಸ ಮಾಡುತ್ತಾ, ಬಗರ್ ಹುಕುಂ ಸಂಬಂಧಿತ ಕೆಲಸಗಳಿಗೆ ಹೆಚ್ಚಿನ ಆದ್ಯತೆ ನೀಡಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಬಡವರ, ರೈತರ ಪರ ಕೆಲಸ ಮಾಡಲು ಅಸಡ್ಡೆ ತೋರುತ್ತಿದ್ದಾರೆ ಎಂದು ಸಚಿವ ಕೃಷ್ಣ ಬೈರೇಗೌಡ ಅಸಮಾಧಾನ ಹೊರಹಾಕಿದರು.

# ಸರ್ಕಾರಿ ನೌಕರರ ಸಂಘದ ಚುನಾವಣೆ: ಹೈಕೋರ್ಟ್ ತಡೆ




ಬೆಂಗಳೂರು: ಚುನಾವಣಾ ಪ್ರಕ್ರಿಯೆ ಹಾಗೂ ಚುನಾವಣಾಧಿಕಾರಿ ನೇಮಕಕ್ಕೆ ತಡೆ ವಿಧಿಸಿ ಸೆ.30ರಂದು ಬೆಂಗಳೂರಿನ ಸಿಟಿ ಸಿವಿಲ್ ನ್ಯಾಯಾಲಯ (ಸಿಸಿಹೆಚ್–19) ಹೊರಡಿಸಿದ್ದ ಆದೇಶಕ್ಕೆ ತಡೆ ನೀಡಿ ಹೈಕೋರ್ಟ್ ನ್ಯಾಯಪೀಠ ಆದೇಶ ಹೊರಡಿಸಿತು. ಇದೇ ವೇಳೆ ಈ ಆದೇಶಕ್ಕೆ ಬದಲಾವಣೆ ಅಥವಾ ಮಾರ್ಪಾಡು ಮಾಡುವಂತೆ ಕೋರುವ ಹಕ್ಕನ್ನು ಪ್ರತಿವಾದಿಗಳು ಹೊಂದಿರುತ್ತಾರೆ ಎಂದು ಆದೇಶದಲ್ಲಿ ಹೇಳಿರುವ ನ್ಯಾಯಪೀಠ, ವಿಚಾರಣೆಯನ್ನು ಅಕ್ಟೋಬರ್ 21ಕ್ಕೆ ಮುಂದೂಡಿದೆ. ಹಳೆಯ ನಿಯಮಗಳನ್ನು ತೋರಿಸಿ ಸಿಟಿ ಸಿವಿಲ್ ಕೋರ್ಟ್‌ಗೆ ಹಾದಿ ತಪ್ಪಿಸಲಾಗಿದೆ. ಅಲ್ಲದೇ ಸಂಘದ ವಾದ ಆಲಿಸಿದೆ ಸಿಟಿ ಸಿವಿಲ್ ಕೋರ್ಟ್ ಆದೇಶ ಮಾಡಿದೆ" ಎಂದರು.

# ಆರ್‌ಟಿಓ ಚೆಕ್ ಪೋಸ್ಟ್ ಮೇಲೆ ಲೋಕಾಯುಕ್ತ ದಾಳಿ !




ಬೆಳಗಾವಿ : ಲೋಕಾಯುಕ್ತ ಎಸ್‌ಪಿ ಹನುಮಂತರಾಯ ಅವರ ನೇತೃತ್ವದ ಲೋಕಾಯುಕ್ತ ಸಿಬ್ಬಂದಿ ಬೆಳಗಾವಿ ಜಿಲ್ಲೆಯ ನಿಪ್ಪಾಣಿ ತಾಲೂಕಿನ ಕೊಗನೊಳ್ಳಿ ಗ್ರಾಮದ ರಾಷ್ಟ್ರೀಯ ಹೆದ್ದಾರಿ 4 ಬಳಿಯ ಚೆಕ್ ಪೋಸ್ಟ್ ಮೇಲೆ ಬೆಳ್ಳಂಬೆಳಗ್ಗೆ ದಾಳಿ ನಡೆಸಿದೆ. ಅಧಿಕಾರಿಗಳು ದಾಖಲೆಗಳ ಪರಿಶೀಲನೆಯಲ್ಲಿ ತೊಡಗಿದ್ದಾರೆ. ಅಧಿಕಾರಿಗಳು ಲಾರಿ ಚಾಲಕರಿಂದ ಹಣ ವಸೂಲಿ ಮಾಡುತ್ತಿದ್ದಾರೆ ಎಂಬ ದೂರು ಕೇಳಿ ಬಂದ ಹಿನ್ನೆಲೆಯಲ್ಲಿ ಈ ದಾಳಿ ನಡೆದಿದೆ. ಸುಮಾರು ಆರು ಜನ ಅಧಿಕಾರಿಗಳ ತಂಡ ಪರಿಶೀಲನೆ ನಡೆಸಿದೆ. ದೂರುಗಳು ಕೇಳಿಬಂದ ಹಿನ್ನೆಲೆಯಲ್ಲಿ ಲೋಕಾಯುಕ್ತ ಅಧಿಕಾರಿಗಳು ಈ ದಿಢೀರ್ ದಾಳಿ ಮುಂದುವರೆಸಿದ್ದಾರೆ.

# ರಾಜ್ಯ ಸರ್ಕಾರಿ ನೌಕರರ ಸಂಘಕ್ಕೆ ಆಡಳಿತಾಧಿಕಾರಿ ನೇಮಿಸಿ




ಬೆಂಗಳೂರು : ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ 2024 ರಿಂದ 2029ನೇ ಸಾಲಿನವರೆಗಿನ ಆಡಳಿತ ಮಂಡಳಿ ಚುನಾವಣೆ ಬಾಕಿ ಇದೆ. ಪ್ರಸ್ತುತ ಸಂಘ–ಸಂಸ್ಥೆಗಳ ಕಾಯ್ದೆ ಮತ್ತು ನಿಯಮಾವಳಿಗಳ ಅನ್ವಯ ರಾಜ್ಯ ಸರ್ಕಾರಿ ನೌಕರರ ಸಂಘದ ಆಡಳಿತ ಮಂಡಳಿಯ ಚುನಾವಣೆಯು ನಿಗದಿತ ಸಮಯದಲ್ಲಿ ನಡೆದಿರುವುದಿಲ್ಲ. ಸಂಘದ ಬೈಲಾ ಅನ್ವಯ ಈಗಿನ ಆಡಳಿತ ಮಂಡಳಿಯು ನಿಗದಿತ ಸಮಯದ ಒಳಗೆ ಚುನಾವಣೆಯನ್ನು ನಡೆಸಲು ವಿಫಲವಾಗಿದೆ ಎಂದು ದೂರುಗಳು ಕೇಳಿ ಬಂದಿದ್ದವು. ಸಿ.ಎನ್. ಮಂಜುನಾಥ್ ಅವರನ್ನು ಆಡಳಿತಾಧಿಕಾರಿಯಾಗಿ ನೇಮಿಸಿ ಸರ್ಕಾರ ಆದೇಶ ಹೊರಡಿಸಿದೆ.

# 10ನೇ ತರಗತಿ ವಿದ್ಯಾರ್ಥಿಗಳಿಗೆ ಕೃಪಾಂಕ ಇಲ್ಲ !



ಬೆಂಗಳೂರು: ಮುಂದಿನ ವರ್ಷದಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಕೃಪಾಂಕ (ಗ್ರೇಸ್ ಮಾರ್ಕ್ಸ್) ನೀಡುವುದನ್ನು ನಿಲ್ಲಿಸಲಾಗುವುದು ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ತಿಳಿಸಿದರು. ಕೃಪಾಂಕ್ ನೀಡದಂತೆ ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಹಾಗಾಗಿ, ಮುಂದಿನ ವರ್ಷದಿಂದ ಕೃಪಾಂಕ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಈ ವರ್ಷ 6,31,204 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಆ ಮೂಲಕ ರಾಜ್ಯದ ಒಟ್ಟಾರೆ ಫಲಿತಾಂಶ ಶೇ.73.40 ಆಗಿದೆ. ಕಳೆದ ವರ್ಷ ಶೇ.83ರಷ್ಟು ಫಲಿತಾಂಶ ಬಂದಿತ್ತು. ಈ ಬಾರಿ 2288 ಶಾಲೆಗಳು ಶೇ.100ರಷ್ಟು ಫಲಿತಾಂಶ ಪಡೆದಿವೆ ಎಂದರು.

# ಬೆಂಗಳೂರು ಟ್ರಾಫಿಕ್ : ಎಐ ಆಧಾರಿತ ಸಿಗ್ನಲ್



ಬೆಂಗಳೂರು: ಸುಗಮ ಸಂಚಾರ ಹಾಗೂ ವಾಹನ ಸವಾರರಿಗೆ ಪ್ರಯಾಣದ ಸಮಯದಲ್ಲಿನ ವಿಳಂಬವನ್ನು ಕಡಿಮೆಗೊಳಿಸುವ ನಿಟ್ಟಿನಲ್ಲಿ ಕೃತಕ ಬುದ್ಧಿಮತ್ತೆ ತಂತ್ರಜ್ಞಾನಾಧರಿತ ಸಿಗ್ನಲ್ ಕಂಟ್ರೋಲ್ ಸಿಸ್ಟಂ ಅನ್ನು ಬೆಂಗಳೂರು ಸಂಚಾರಿ ಪೊಲೀಸರು ಆರಂಭಿಸಿದ್ದಾರೆ. ಬೆಂಗಳೂರು ಅಡಾಪ್ಟಿವ್ ಟ್ರಾಫಿಕ್ ಕಂಟ್ರೋಲ್ ಸಿಸ್ಟಂ ಎಂಬ ವಿನೂತನ ಯೋಜನೆಯನ್ನ ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲಾಗಿದ್ದು, ಸುಗಮ ಸಂಚಾರ ಹಾಗೂ ಪ್ರಯಾಣದ ಸಮಯ ವಿಳಂಬವನ್ನು ಕಡಿಮೆ ಮಾಡಲಿದೆ ಎಂದು ಸಂಚಾರ ವಿಭಾಗದ ಜಂಟಿ ಆಯುಕ್ತ ಎಂ.ಎನ್. ಅನುಚೇತ್ ಅವರು ಪ್ರಕಟಣೆಯಲ್ಲಿ ತಿಳಿಸಿದರು.

# ಟಾಟಾ ಅವರ ಸಾವಿಗೆ ದೇಶವೇ ಕಂಬನಿ : ಪ್ರಧಾನಿ ಮೋದಿ



ದೆಹಲಿ: "ರತನ್ ಟಾಟಾ ಜೀ ಅವರೊಂದಿಗಿನ ಅಸಂಖ್ಯಾತ ಸಂವಾದಗಳಿಂದ ನನ್ನ ಮನಸ್ಸು ತುಂಬಿದೆ" ಎಂದು ರತನ್ ಟಾಟಾ ಅವರೊಂದಿಗಿನ ಒಡನಾಟವನ್ನು ಪ್ರಧಾನಿ ನರೇಂದ್ರ ಮೊದಿ ಅವರು ನೆನೆಪಿಸಿಕೊಂಡಿದ್ದು, ಅವರ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ. ರತನ್ ಟಾಟಾ ಜಿ ಅವರು ಒಬ್ಬ ದಾರ್ಶನಿಕ ನಾಯಕ, ಸಹಾನುಭೂತಿಯ ಆತ್ಮ ಮತ್ತು ಅಸಾಧಾರಣ ಮನುಷ್ಯ. ಟಾಟಾ ಅವರು ಭಾರತದ ಅತ್ಯಂತ ಹಳೆಯ ಮತ್ತು ಪ್ರತಿಷ್ಠಿತ ವ್ಯಾಪಾರ ಸಂಸ್ಥೆಗಳಲ್ಲಿ ಒಂದಕ್ಕೆ ಸ್ಥಿರ ನಾಯಕತ್ವವನ್ನು ಒದಗಿಸಿದರು ಎಂದರು.

# 2028ರವರೆಗೆ ಉಚಿತ ಅಕ್ಕಿ ವಿತರಣೆ : ಕೇಂದ್ರ




ನವದೆಹಲಿ: ಬಜೆಟ್‌ನಲ್ಲಿ ಘೋಷಿಸಿದಂತೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ (ಎನ್‌ಎಫ್‌ಎಸ್‌ಎ) ಅಡಿಯಲ್ಲಿ 2028ರವರೆಗೆ ಉಚಿತವಾಗಿ ಪಡಿತರ ವಿತರಿಸುವ ಯೋಜನೆಯನ್ನು ಮುಂದುವರಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ. ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಯಿತು. ಸೂಕ್ಷ್ಮ ಪೋಷಕಾಂಶಗಳಿಂದ (ಕಬ್ಬಿಣ, ಫೋಲಿಕ್ ಆಮ್ಲ, ವಿಟಮಿನ್ ಬಿ12) ಸಮೃದ್ಧವಾಗಿರುವ ಅಕ್ಕಿಯನ್ನು ಪೂರೈಕೆ ಮಾಡಲಾಗುವುದು. ಇದಕ್ಕಾಗಿ 17,082 ಕೋಟಿ ರೂಪಾಯಿ ಭರಿಸಲಾಗುವುದು ಎಂದು ಕೇಂದ್ರ ತಿಳಿಸಿದೆ.

# ತಮಿಳುನಾಡು ಸ್ಯಾಮ್‌ಸಂಗ್ ಇಂಡಿಯಾ ಘಟಕದಲ್ಲಿ ಉದ್ವಿಗ್ನ




ಚೆನ್ನೈ: ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಧರಣಿ ನಡೆಸುತ್ತಿರುವ ತಮಿಳುನಾಡಿನ ಶ್ರೀ ಪೆರಂಬುದೂರ್ ಜಿಲ್ಲೆಯ ಸುಂಗುವರ ಚತ್ರಮ್‌ನ ಸ್ಯಾಮ್‌ಸಂಗ್ ಇಂಡಿಯಾ ಘಟಕದ ನೌಕರರನ್ನು ಪೊಲೀಸರು ವಶಕ್ಕೆ ಪಡೆದಿದ್ದು, ಸ್ಥಳದಲ್ಲಿ ಬಿಗುವಿನ ವಾತಾವರಣ ಉಂಟಾಗಿದೆ. ಸಿಪಿಐ(ಎಂ) ಬೆಂಬಲಿತ ಸೆಂಟರ್ ಫಾರ್ ಇಂಡಿಯನ್ ಟ್ರೇಡ್ ಯೂನಿಯನ್‌ನ ನಾಯಕನನ್ನು ಪೊಲೀಸರು ಬಂಧಿಸಿದ್ದಾರೆ. ಸ್ಯಾಮ್‌ಸಂಗ್ ಘಟಕದಲ್ಲಿ 1,800 ನೌಕರರು ಕಾರ್ಯ ನಿರ್ವಹಿಸುತ್ತಿದ್ದು, 1000 ಮಂದಿ ಧರಣಿಗೆ ಮುಂದಾಗಿದ್ದಾರೆ.

# ಭಾರತೀಯ ಯೋಧನ ಅಪಹರಣ : ಶವವಾಗಿ ಪತ್ತೆ




ನವದೆಹಲಿ: ಭಯೋತ್ಪಾದಕರಿಂದ ಅಪಹರಣಕ್ಕೆ ಒಳಗಾದ ಜಮ್ಮು ಮತ್ತು ಕಾಶ್ಮೀರದ ಅನಂತನಾಗ್‌ನಲ್ಲಿ ಟೆರಿಟೋರಿಯಲ್ ಆರ್ಮಿಯ ಯೋಧರ ಮೃತದೇಹವನ್ನು ಉತ್ರಾಸೂ ಪ್ರದೇಶದ ಸಾಂಗ್ಲಾನ್ ಅರಣ್ಯ ಪ್ರದೇಶದಿಂದ ವಶಪಡಿಸಿಕೊಳ್ಳಲಾಗಿದೆ ಎಂದು ಸೇನೆ ತಿಳಿಸಿದೆ. ಜಮ್ಮು ಮತ್ತು ಕಾಶ್ಮೀರದ ಅನಂತನಾಗ್ ಅರಣ್ಯ ಪ್ರದೇಶದಲ್ಲಿ ಟೆರಿಟೋರಿಯಲ್ ಆರ್ಮಿಯ ಇಬ್ಬರು ಯೋಧರನ್ನು ಅಪಹರಣ ಮಾಡಲು ಭಯೋತ್ಪದಾಕರು ಪ್ರಯತ್ನಿಸಿದ್ದಾರೆ. ಈ ವೇಳೆ, ಓರ್ವ ಯೋಧ ಸುರಕ್ಷಿತವಾಗಿ ವಾಪಸ್ ಬರುವಲ್ಲಿ ಯಶಸ್ವಿಯಾಗಿದ್ದಾರೆ.

# 2014ರಲ್ಲಿ ನಿಜವಾದ ಸ್ವಾತಂತ್ರ್ಯ ಸಿಕ್ಕಿತು : ಕಂಗನಾಗೆ ನೋಟಿಸ್



ಹೈದರಾಬಾದ್: ಭಾರತಕ್ಕೆ ನಿಜವಾದ ಸ್ವಾತಂತ್ರ್ಯ 2014ರಲ್ಲಿ ಸಿಕ್ಕಿತ್ತು ಎಂಬ ಕಂಗನಾ ರಣಾವತ್ ಹೇಳಿಕೆ ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿ ಆಧರಿಸಿ ನಟಿಗೆ ಮಧ್ಯ ಪ್ರದೇಶದ ಜಬಲ್‌ಪುರ್ ವಿಶೇಷ ಸಂಸದ–ಶಾಸಕರ ನ್ಯಾಯಾಲಯ ನೋಟಿಸ್ ಜಾರಿ ಮಾಡಿದೆ.



ಕರಾವಳಿ ತರಂಗಿಣಿ

# ಸಿನಿ ತರಂಗಿಣಿ

## ರಾಷ್ಟ್ರಪತಿಗಳಿಂದ ಪ್ರಶಸ್ತಿ ಪಡೆದ ರಿಷಭ್ ಶೆಟ್ಟಿ..



ಇಡೀ ವಿಶ್ವವೇ ಕನ್ನಡ ಚಿತ್ರರಂಗದ ಕಡೆ ತಿರುಗಿ ನೋಡುವಂತೆ ಮಾಡಿದ ಚಿತ್ರ ಹೊಂಬಾಳೆ ಫಿಲಂಸ್ ನಿರ್ಮಾಣದ "ಕಾಂತಾರ". ರಿಷಭ್ ಶೆಟ್ಟಿ ಈ ಚಿತ್ರದ ನಾಯಕನಾಗಿ ನಟಿಸುವುದಷ್ಟೇ ಅಲ್ಲದೆ, ನಿರ್ದೇಶನವನ್ನು ಮಾಡಿದ್ದರು. 70 ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಯಲ್ಲಿ "ಕಾಂತಾರ" ಚಿತ್ರಕ್ಕೆ ಎರಡು ರಾಷ್ಟ್ರೀಯ ಪ್ರಶಸ್ತಿಗಳು ಬಂದಿದೆ."ಕಾಂತಾರ" ಚಿತ್ರಕ್ಕೆ ಅತ್ಯುತ್ತಮ ಮನೋರಂಜನಾ ಚಿತ್ರ ಹಾಗೂ ಈ ಚಿತ್ರದ ನಟನೆಗಾಗಿ ರಿಷಭ್ ಶೆಟ್ಟಿ ಅವರು ಅತ್ಯುತ್ತಮ ನಟ ಪ್ರಶಸ್ತಿ ಪಡೆದುಕೊಂಡಿದ್ದಾರೆ. ಇತ್ತೀಚೆಗೆ ದೆಹಲಿಯಲ್ಲಿ ನಡೆದ 70ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ನಿರ್ಮಾಪಕ ವಿಜಯ್ ಕಿರಗಂದೂರು ಹಾಗೂ ನಟ, ನಿರ್ದೇಶಕ ರಿಷಭ್ ಶೆಟ್ಟಿ ರಾಷ್ಟ್ರಪತಿಗಳಾದ ದ್ರೌಪದಿ ಮುರ್ಮು ಅವರಿಂದ ಪ್ರಶಸ್ತಿ ಸ್ವೀಕರಿಸಿದ್ದಾರೆ.

## ಹೊಂಬಾಳೆಗೆ ಅದೃಷ್ಟ ತಂದ ಕೆಜಿಎಫ್, ಕಾಂತಾರ..



ಹೊಂಬಾಳೆ ಫಿಲಂಸ್ ಲಾಂಛನದಲ್ಲಿ ವಿಜಯ್ ಕಿರಗಂದೂರು ನಿರ್ಮಿಸಿರುವ, ಪ್ರಶಾಂತ್ ನೀಲ್ ನಿರ್ದೇಶನದಲ್ಲಿ ಯಶ್ ನಾಯಕರಾಗಿ ನಟಿಸಿದ್ದ "ಕೆ.ಜಿ.ಎಫ್ 2" ಮತ್ತು ರಿಷಬ್ ಶೆಟ್ಟಿ ನಟಿಸಿ, ನಿರ್ದೇಶಿಸಿದ "ಕಾಂತಾರ" ಈ ಎರಡು ಚಿತ್ರಗಳು ಗಲ್ಲಾಪೆಟ್ಟಿಗೆ ದೋಚಿದ್ದು ಮಾತ್ರವಲ್ಲದೆ 70ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಯಲ್ಲಿ ಈ ಎರಡು ಚಿತ್ರಗಳಿಗೆ ರಾಷ್ಟ್ರೀಯ ಪ್ರಶಸ್ತಿಗಳು ಲಭಿಸಿ ಹೊಂಬಾಳೆಯ ಅದೃಷ್ಟವನ್ನು ಇಮ್ಮಡಿಗೊಳಿಸಿದೆ. ದೆಹಲಿಯಲ್ಲಿ ನಡೆದ 70ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಹೊಂಬಾಳೆ ಫಿಲಂಸ್‌ನ ಶೈಲಜಾ ವಿಜಯ್ ಕುಮಾರ್ ಪ್ರಶಸ್ತಿ ಸ್ವೀಕರಿಸಿದ್ದಾರೆ. ಈ ಚಿತ್ರವನ್ನು ನಿರ್ದೇಶಿಸಿದ ಪ್ರಶಾಂತ್ ನೀಲ್ ಅವರಿಗೆ ನಿರ್ಮಾಪಕ ವಿಜಯ್ ಕಿರಗಂದೂರು ಧನ್ಯವಾದ ಹೇಳಿದ್ದಾರೆ.

## "ಸಂತೋಷ ಸಂಗೀತ" ಸದ್ಯದಲ್ಲೇ ತೆರೆಗೆ..

ಸಿದ್ದು ಎಸ್ ನಿರ್ಮಿಸಿ, ನಿರ್ದೇಶಿಸಿರುವ, ಅರ್ನವ್ ವಿನ್ಯಾಸ್ ಹಾಗೂ ರಾಣಿ ವರದ್ ನಾಯಕ-ನಾಯಕಿಯಾಗಿ ನಟಿಸಿರುವ "ಸಂತೋಷ ಸಂಗೀತ" ಚಿತ್ರದ ಟ್ರೇಲರ್ ಇತ್ತೀಚೆಗೆ ಬಿಡುಗಡೆಯಾಯಿತು. ಚಂದ್ರಶೇಖರ ಶಿವರಾಧ್ಯ ಸ್ವಾಮೀಜಿರವರು ಟ್ರೇಲರ್ ಬಿಡುಗಡೆ ಮಾಡಿ ಹಾರೈಸಿದರು. ಈ ಚಿತ್ರವು 'ಯು' ಪ್ರಮಾಣ ಪತ್ರ ಪಡೆದಿದ್ದು, ಬಿಡುಗಡೆಗೆ ಸಿದ್ಧವಾಗಿದೆ. ಟ್ರೇಲರ್ ಬಿಡುಗಡೆ ನಂತರ ಮಾತನಾಡಿದ ನಿರ್ದೇಶಕರು "ಸಂತೋಷ ಸಂಗೀತ" ಚಿತ್ರ ನಿಲ್ಲಲು ನಾಲ್ಕು ಕಾಲು ತುಂಬಾ ಅವಶ್ಯಕತೆ ಇದ್ದು, ತಯಾರಿ, ನಟನೆ, ಎರಡು ಕಾಲದರೆ, ಜನರಿಗೆ ತಲುಪಿಸುವ ಮಾಧ್ಯಮ ಮತ್ತು ವೀಕ್ಷಕರ ಪ್ರೀತಿ ಇನ್ನೆರಡು ಕಾಲು ಆಗಿರುತ್ತದೆ. ಈ ನಾಲ್ಕು ಕಾಲು ನಿಂತರೆ ಸಿನಿಮಾ ನಿಲ್ಲುತ್ತದೆ. ನಾನು ಎಂ.ಸಿ.ಎ ಪದವಿಧರ. ಸಿನಿಮಾ ಪ್ರೇಮಿ. ಒಳ್ಳೆಯ ಸಿನಿಮಾ ನೋಡಿ, ನಾನು ಈ ರೀತಿ ಸಿನಿಮಾ ಮಾಡಬೇಕೆಂದು ಕನಸು ಕಂಡವನು. ಆ ಕನಸು ಈಗ ನನಸ್ಸಾಗಿದೆ ಎಂದರು.




## 'ಮರ್ಫಿ'ಗೆ ಸಾಥ್ ಕೊಟ್ಟ ಬ್ಯೂಟೀಸ್..

ಆರಂಭದಿಂದಲೂ ರೋಮಾಂಚಕ ವಾತಾವರಣ ಸೃಷ್ಟಿಸಿಕೊಂಡು ಬಂದಿರುವ ಸಿನಿಮಾ ಮರ್ಫಿ. ಮನಮೋಹಕ ಹಾಡುಗಳ ಮೂಲಕ ಪ್ರೇಕ್ಷಕರಿಗೆ ಆಮಂತ್ರಣ ಕೊಟ್ಟಿರುವ ಚಿತ್ರತಂಡವೀಗ ಟ್ರೇಲರ್ ಮೂಲಕ ನಿರೀಕ್ಷೆ ಹೆಚ್ಚು ಮಾಡಿದೆ. ಬೆಂಗಳೂರಿನ ಒರಿಯನ್ ಮಾಲ್‌ನಲ್ಲಿ 'ಮರ್ಫಿ' ಸಿನಿಮಾದ ಟ್ರೇಲರ್ ಬಿಡುಗಡೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಇಡೀ ಚಿತ್ರತಂಡ ಕಾರ್ಯಕ್ರಮದಲ್ಲಿ ಭಾಗಿಯಾಗಿತ್ತು. 'ಮರ್ಫಿ' ಟ್ರೇಲರ್ ಲಾಂಚ್ ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿದ್ದು, ನವರಾತ್ರಿ ಹಬ್ಬದ ಸುಂದರ್ಭದಲ್ಲಿ ಚಿತ್ರತಂಡ ಸ್ಯಾಂಡಲ್‌ವುಡ್‌ನ 9 ಬ್ಯೂಟಿಗಳಾದ ಪ್ರಿಯಾಂಕ ಉಪೇಂದ್ರ, ಅಮೃತಾ ಅಯ್ಯಂಗಾರ್, ರಾಗಿಣಿ ದ್ವಿವೇದಿ, ಖುಷಿ ರವಿ, ಮೇಘನ ಗಾಂವಕರ್, ಸಪ್ತಮಿ ಗೌಡ, ಧನ್ಯ ರಾಮ್ ಕುಮಾರ್, ರೀಶ್ಮಾ ನಾಣಯ್ಯ, ಅಂಕಿತ ಅಮರ್ ಈ 9 ನಟಿಮಣಿಯರು ಟ್ರೈಲರ್ ಲಾಂಚ್ ಮಾಡಿ 'ಮರ್ಫಿ' ಚಿತ್ರ ತಂಡಕ್ಕೆ ಶುಭಾಶಯ ತಿಳಿಸಿದರು.






Edited,Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ Digantha Mudrana Limited, Yeyyadi, Mangaluru 575008 email: karavalitharangini@gmail.com PH: +91 9880109212